MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಯುವ ಸ್ಫೂರ್ತಿ



"ಒಂದೊಂದನ್ನು ಮಾಡಿ, ಮತ್ತು ಅದನ್ನು ಮಾಡುವಾಗ ನಿಮ್ಮ ಇಡೀ ಆತ್ಮವನ್ನು ಉಳಿದೆಲ್ಲವನ್ನೂ ಹೊರತುಪಡಿಸಿ ಅದರಲ್ಲಿ ಇರಿಸಿ."

–ಸ್ವಾಮಿ ವಿವೇಕಾನಂದ

ಸಂಪುಟ: 04 | ಸಂಚಿಕೆ : 176 | ಶನಿವಾರ: 26–04–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ:2–00

VOLUME: 04 | ISSUE: 176 | SATURDAY: 26–04–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಕರ್ನಾಟಕದಲ್ಲಿರುವ ಪಾಕ್ ಪ್ರಜೆಗಳ ಗಡಿಪಾರಿಗೆ ಕ್ರಮ : ಪರಮೇಶ್ವರ್

**ಬೆಂಗಳೂರು, ಏ.26–** ಪಹಲ್ಗಾಮ್ ದಾಳಿಯ ಪರಿಣಾಮದ ಬಳಿಕ ರಾಜ್ಯದಲ್ಲಿ ಅಧಿಕೃತವಾಗಿ ನೆಲೆಸಿರುವ ಪಾಕಿಸ್ತಾನದ ಪ್ರಜೆಗಳನ್ನು ಗಡೀಪಾರು ಮಾಡಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಮ್ಮು–ಕಾಶ್ಮೀರದಲ್ಲಿ ಉಗ್ರರ ದಾಳಿಯಿಂದಾಗಿ ಕೇಂದ್ರ ಸರ್ಕಾರ ಕೆಲವು ನಿರ್ಧಾರಗಳನ್ನು ಕೈಗೊಂಡಿದೆ. ಅದರ ಪರಿಣಾಮ ಪಾಕಿಸ್ತಾನದ ಪ್ರಜೆಗಳಿಗೆ ವೀಸಾ ರದ್ದು ಮಾಡಲಾಗಿದೆ. ಹೀಗಾಗಿ ರಾಜ್ಯದಲ್ಲಿ ಅಧಿಕೃತವಾಗಿ ನೆಲೆಸಿರುವ ಪಾಕಿಸ್ತಾನೀಯರನ್ನು ಪರಿಶೀಲಿಸಲಾಗುತ್ತಿದೆ. ಅವರ ವೀಸಾಗಳನ್ನು ರದ್ದು ಮಾಡಿ ವಾಪಸ್ ಕಳುಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಕೇಂದ್ರ ವಿದೇಶಾಂಗ ಸಚಿವಾಲಯ ತೆಗೆದುಕೊಳ್ಳುವ ಕ್ರಮಗಳಿಗೆ ರಾಜ್ಯದ ಪೊಲೀಸರು ಸಹಕಾರ ನೀಡಲಿದ್ದಾರೆ. ಸದ್ಯಕ್ಕೆ ಪಾಕಿಸ್ತಾನಿ ಪ್ರಜೆಗಳ ವಿರುದ್ಧಮಾತ್ರ ಈ ನಿರ್ಧಾರ ಕೈಗೊಳ್ಳಲಾಗಿದೆ. ಅನಧಿಕೃತವಾಗಿ ನೆಲೆಸಿರುವವರ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ. ಅದನ್ನು ಪರಿಶೀಲಿಸಬೇಕಿದೆ. ಒಂದು ವೇಳೆ ಆ ರೀತಿ ಅಕ್ರಮವಾಗಿ ನೆಲೆಸಿದರೆ ಅವರ ವಿರುದ್ಧ



ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕಾಶ್ಮೀರದಲ್ಲಿನ ದಾಳಿಯಲ್ಲಿ ಕೇಂದ್ರ ಗುಪ್ತಚರ ವೈಫಲ್ಯ ಇದೆ ಎಂಬುದು ಸ್ಪಷ್ಟವಾಗಿದೆ. ಅವರು ಅನೇಕ ಬಾರಿ ನಮ್ಮ ರಾಜ್ಯದ ಪೊಲೀಸರಿಗೆ ಮಾಹಿತಿ ನೀಡುತ್ತಾರೆ. ನಮ್ಮಿಂದಲೂ ಮಾಹಿತಿ ತೆಗೆದುಕೊಳ್ಳುತ್ತಾರೆ. ಇದು ರಾಷ್ಟ್ರೀಯ ಭದ್ರತಾ ವಿಚಾರವಾಗಿರುವುದರಿಂದ ಕರ್ನಾಟಕವೂ ಸೇರಿದಂತೆ ಬೇರೆಲ್ಲಾ ಕಡೆ ಇರುವ ಸ್ಲೀಪರ್‌ಸೆಲ್‌ಗಳ ಬಗ್ಗೆ ಕೇಂದ್ರ ಸರ್ಕಾರ ಮಾಹಿತಿ ಇರುತ್ತದೆ.

2ನೇ ಪುಟಕ್ಕೆ

# ವೀರಶೈವ ಲಿಂಗಾಯತ ಸಮಾಜವನ್ನು ಒಡೆಯುವ ಸರ್ಕಾರದ ಕ್ರಮವನ್ನ ವಿರೋಧಿಸಿ ಏ.28 ರಂದು ಪ್ರತಿಭಟನಾ ರ್‍ಯಾಲಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಏ.26–** ಅವೈಜ್ಞಾನಿಕ ಜಾತಿ ಗಣತಿ ಆಧಾರದ ಮೇಲೆ ವೀರಶೈವ ಲಿಂಗಾಯತ ಸಮಾಜವನ್ನು ಒಡೆಯುವ ಸರ್ಕಾರದ ನಡೆಯನ್ನು ವಿರೋದಿಸಿ ವಿರೋಧಿಸಿ ಏ.28 ರಂದು ರಾಯಚೂರಿನಲ್ಲಿ ಪ್ರತಿಭಟನಾ ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ವೀರಶೈವ ಮಹಾಸಭಾದ ತಾಲೂಕ ಅಧ್ಯಕ್ಷರಾದ ಅರುಣಕುವಾರ ಚಂದಾ ಹೇಳಿದರು.

ಪಟ್ಟಣದ ಪತ್ರಿಕ ಭವನದಲ್ಲಿ ಸುದ್ದಿಗೋಷ್ಠಿಯನ್ನು




ಉದ್ದೇಶಿಸಿ ಮಾತನಾಡಿದ ಅವರು, ಕರ್ನಾಟಕ ಘನ ಸರ್ಕಾರವು 10 ವರ್ಷಗಳ ಹಿಂದೆ ಶ್ರೀಕಾಂತರಾಜು ಅವರ ಅಧ್ಯಕ್ಷತೆಯಲ್ಲಿ ನಡೆಸಿದ ಜಾತಿ–ಜನಗಣತಿ, ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿರುವವರ ಕುರಿತಾದ ಅವೈಜ್ಞಾನಿಕ ಮತ್ತು ಅಸಂವಿಧಾನಿಕ

2ನೇ ಪುಟಕ್ಕೆ

# ನೇಕಾರ ಒಕ್ಕೂಟದಿಂದ ದೇವರ ದಾಸಿಮಯ್ಯ ಜಯಂತಿ ಸಾಧಕರಿಗೆ ಸನ್ಮಾನ ಸಮಾರಂಭ–ಕೆ.ಈ.ನರಸಿಂಹ



ಯುವ ಮಾರ್ಗ ಸುದ್ದಿ

**ಮಾನ್ವಿ,ಏ.26–** ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ತಾಲೂಕ ಘಟಕ ಮಾನ್ವಿ ವತಿಯಿಂದ ಭಾನುವಾರ ಪಟ್ಟಣದ ತೊಗಟವೀರ ಶ್ರೀ ಚೌಡೇಶ್ವರಿ ದೇವಾಲಯದ ಆವರಣದಲ್ಲಿ ನೇಕಾರ ಸಂತ ವಿಶ್ವಮಾನ್ಯ ಶರಣ ಶ್ರೀದೇವರ ದಾಸಿಮಯ್ಯ ಜಯಂತಿ ಮತ್ತು ಸಮುದಾಯದ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ಅಧ್ಯಕ್ಷ ಕೆ.ಈ.ನರಸಿಂಹ ಹೇಳಿದರು.

ಪಟ್ಟಣದ ಸಂತೆ ಬಜಾರದಲ್ಲಿರುವ ಶ್ರೀ ರಾಮಲಿಂಗ ಚೌಡೇಶ್ವರಿದೇವಾಲದಲ್ಲಿ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ತೊಗಟವೀರ,ದೇವಾಂಗ ನೇಕಾರ ಸಮುದಾಯಗಳ ಒಕ್ಕೂಟ ದಲ್ಲಿ ನಮ್ಮ ಭಾಗದಲ್ಲಿ ಕುರುಹಿ ನಶೆಟ್ಟಿ, ಪದ್ಮಶಾಲಿ. ಪಟ್ಟಸಾಲಿ. ಸಕುಳಸಾಲಿ ಹೀಗೆ 6 ಒಳಪಂಗಡಗಳ ಸಮುದಾಯ ಗಳು ಬರುತ್ತವೆ. ಎಲ್ಲಾ ಸೇರಿ ತಾಲೂಕಿನಲ್ಲಿ ಸುಮಾರು ಮೂರು ಸಾವಿರಕ್ಕೂ ಹೆಚ್ಚು ಜನ ಸಂಖ್ಯೆ ಇದೆ. ಇವರೆಲ್ಲ ರನ್ನು ಒಟ್ಟಿಗೆ ಸೇರಿಸಬೇಕು. ಪರಸ್ಪರ ಒಗ್ಗೂಡಿ ಕೆಲಸ ಮಾಡಿ ನೇಕಾರ ಸಮುದಾಯ ದ ಅಭಿವೃದ್ಧಿಗೆ ಶ್ರಮಿಸಬೇಕು ಎನ್ನುವ ಉದ್ದೇಶದಿಂದ ಈ ರಾಜ್ಯ

2ನೇ ಪುಟಕ್ಕೆ

# ಬಸ್ ಡಿಪೋ ವ್ಯವಸ್ಥಾಪಕ ಕಿರುಕುಳಕ್ಕೆ ಬೇಸತ್ತು ಚಾಲಕ ಆತ್ಮಹತ್ಯೆಗೆ ಯತ್ನ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಏ.26–** ಪಟ್ಟಣದ ಬಸ್ ಡಿಪೋ ವ್ಯವಸ್ಥಾಪಕ ರಾಹುಲ್ ಅವರ ಕಾರ್ಯವೈಖರಿಗೆ ಬಸ್ ಚಾಲಕ ಅಬ್ದುಲ್ ಸಾಬ ಬೇಸತ್ತು ಗುರುವಾರ ಸಂಜೆ ಬಸ್ ಡಿಪೋದಲ್ಲಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿ ಘಟನೆ ನಡೆದಿದೆ.ಪತ್ರಕರ್ತರ ಜೊತೆ ಚಾಲಕ ಮಾತನಾಡಿ, ಚಾಲಕ ಹುದ್ದೆಗೆ ನಾನು 18ವರ್ಷದಿಂದ ಕಾರ್ಯನಿರ್ವಹಿಸುತ್ತಿದ್ದೆನೆ ಚಾಲಕ ಹಾಗೂ ಕಂಡಕ್ಟರ್ ಗೆ ದಿನಾಲು ಕಿರುಕುಳ ನೀಡುತ್ತಿದ್ದು, ಈಗಾಗಲೇ 23 ಜನರನ್ನು ಅಮಾನತು ಮಾಡಿದ್ದಾರೆ. ಇಲ್ಲಿ ಯಾರು ಏನು ನನಗೆ ಮಾಡಲ್ಲ ನಾನೇ ಹೇಳಿದಾಗೇ ನೀವು ಕೇಳಬೇಕು ಇಲ್ಲ ಅಂದರೆ ನಿಮ್ಮನ್ನು ಸಸ್ಪೆಂಡ್ ಮಾಡುತ್ತೆನೆ ಎಂದು ಅವಾಜ್ ಹಾಕುತ್ತನೆ ಎಂದು ಚಾಲಕ ತಮ್ಮ ಅಳಲುನ್ನು ತೊಡಿಕೊಂಡನು.

ಬಸ್ ಚಾಲಕರಿಗೆ ತಮ್ಮ ಕರ್ತವ್ಯವನ್ನು ನಿರ್ವವಹಿಸಿದರು ಮತ್ತೆ ನಿನು ಡಬಲ್

ಡ್ಯುಟಿ ಮಾಡಬೇಕು. ಇಲ್ಲದಿದ್ದರೆ ನಿಮ್ಮನ್ನು ಸೇವೆಯಿಂದ ಅಮಾನತು ಮಾಡುತ್ತೆನೆ ಎಂದು ದಿನನಿತ್ಯ ಕಿರುಕುಳ




ನೀಡುತ್ತಿದ್ದಾನೆ ಎಂದು ಚಾಲಕ ಅಬ್ದುಲ್ ಸಾಬ ಆರೋಪಿಸಿದರು.

# ಪೆಹಲ್ಗಾಮ್ ಘಟನೆ ಖಂಡಿಸಿ ಕಾಂಗ್ರೆಸ್‌ನಿಂದ ಪಂಜಿನ ಮೆರವಣಿಗೆ

ಯುವ ಮಾರ್ಗ ಸುದ್ದಿ

**ಮಾನ್ವಿ.ಏ.26–**ಪೆಹಲ್ಗಾಮ್ ನಡೆದ ಉಗ್ರರ ದಾಳಿಯನ್ನು ಖಂಡಿಸಿ ಮಾನ್ವ ತಾಲೂಕ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಪಟ್ಟಣದ ಬಸವ ವೃತ್ತದ ಬಳಿ ಗುರುವಾರ ಪಂಜಿನ ಪ್ರತಿಭಟನೆ ಹಾಗೂ ಮೃತರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಇದೆ ವೇಳೆ ಶಾಸಕ ಹಂಪಯ್ಯ ನಾಯಕ ಮಾತನಾಡಿ, ಉಗ್ರರ ದಾಳಿ ಅತ್ಯಂತ ಖಂಡನೀಯ ಮತ್ತು ಹೇಯ ಕೃತ್ಯವಾಗಿದೆ. ಇಂತಹ ಘಟನೆಗಳು ಮರುಕಳಿಸದಂತೆ ಪ್ರಧಾನಿಯವರು ದಿಟ್ಟ ನಿರ್ಧಾರ ಕೈಗೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಯುವ ಮುಖಂಡ ರವಿ ಬೋಸರಾಜು, ಬಾಲಸ್ವಾಮಿ ಕೊಡ್ಲಿ, ಸೈ.ಖಾಲಿದ್ ಖಾದ್ರಿ,




ರಾಜಾ ಸುಭಾಷ್ ನಾಯಕ, ಹುಸೇನ್ ಭಾಷ, ಸಿದ್ದಲಿಂಗಪ್ಪ ವಕೀಲರು, ಪ್ರೀತಂ ಕೊಡ್ಲಿ, ಶಿವರಾಜ ವಕೀಲರು ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

# ಅಪಾಯ ತಡೆಗಟ್ಟಲು ಮುಂಜಾಗೃತ ಕ್ರಮಗಳ ಬಗ್ಗೆ ಅರಿವು



**ಯಾದಗಿರಿ : ಏ 26:** ಆಕಸ್ಮಿಕವಾಗಿ ಆಸ್ಪತ್ರೆಯಲ್ಲಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಬೆಂಕಿ ಅವಗಡ ಸಂಭವಿಸಿದಾಗ ಆಗುವ ದುರ್ಘಟನೆ ಹಾಗೂ ಅಪಾಯ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ಅರಿವು ಹಾಗೂ ಅಣಕು ಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಬಿರದಾರ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಆಸ್ಪತ್ರೆ (ಯಿಮ್ಸ), ಜಿಲ್ಲಾ ಮಲೇರಿಯಾ ಅಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಯಾದಗಿರಿ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ಅಗ್ನಿಶಾಮಕ ಸೇವಾ ಸಪ್ತಾಹದ ಅರಿವು ಅಣಕು ಪ್ರದರ್ಶನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಅಗ್ನಿ ಸುರಕ್ಷತಾ ಕ್ರಮಗಳನ್ನು ಎಲ್ಲರೂ ಅಳವಡಿಸಿಕೊಂಡು ಅಮೂಲ್ಯವಾದ ಜೀವವನ್ನು, ಸಸ್ಯ ಸಂಪತ್ತನ್ನು ಬೆಂಕಿಯಿಂದ ರಕ್ಷಿಸಿಕೊಳ್ಳಬೇಕು ಹಾಗೂ ಅಗ್ನಿ ಅವಘಡ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕೆಂದು, ಆಕಸ್ಮಿಕವಾಗಿ ಆಸ್ಪತ್ರೆಯಲ್ಲಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಬೆಂಕಿ ಅವಗಡ ಸಂಭವಿಸಿದಾಗ ಆಗುವ ದುರ್ಘಟನೆ ಹಾಗೂ ಅಪಾಯ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ತಿಳಿಸಿದರು.

ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿಗಳಾದ ಡಾ.ಸಾಜೀದ್ ಅವರು ಮಾತನಾಡಿ, ಏ.14 ರಿಂದ ಏ.20 ರ ವರೆಗೆ, ಸುರಕ್ಷಿತ ಭಾರತವನ್ನು ಹುಟ್ಟು ಹಾಕಲು ಒಂದಾಗೋಣ, ಎಂಬ ಘೋಷ ವಾಕ್ಯದೊಂದಿಗೆ ಅರಿವು ಸಪ್ತಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಅಗ್ನಿಶಾಮಕ ಸಿಬ್ಬಂದಿ ಹಾಗೂ ಅಧಿಕಾರಿಗಳು ಆಕಸ್ಮಿಕ ಬೆಂಕಿ ಸಂಭವಿಸಿದ ಕಡೆ ಹಾಗೂ ತುರ್ತು ಸಂದರ್ಭಗಳಲ್ಲಿ ತಕ್ಷಣ ಧಾವಿಸಿ ತಮ್ಮ ಜೀವದ ಹಂಗು ತೊರೆದು ರಕ್ಷಣಾ ಕಾರ್ಯದಲ್ಲಿ ತೊಡಗಿಸಿಕೊಳ್ಳುತ್ತಿರುವುದು ಶ್ಲಾಘನಿಯ ಈ ಕಾರ್ಯಕ್ರಮದ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳಾದ ಶ್ರೀ ವಿರೇಶ್ ಅವರು ಮಾತನಾಡಿ, ಅಗ್ನಿ ಅವಘಡಗಳ ಸಂದರ್ಭದಲ್ಲಿ ಅಗ್ನಿಶಾಮಕ ಇಲಾಖೆಯಿಂದ ಕೈಗೊಳ್ಳುವ ಕ್ರಮಗಳು ಹಾಗೂ

2ನೇ ಪುಟಕ್ಕೆ

# ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಅರ್ಜಿ ಅಹ್ವಾನ

**ಮಾನ್ವಿ.,ಏ.26–** ತಾಲೂಕಿನ ವಿದ್ಯಾರ್ಥಿಗಳನ್ನು 2025 –26 ನೇ ನೆಯಡಿಯಲ್ಲಿ ಅಯ್ಕೆ ಮಾಡಲು ನಿಯಮಾನುಸಾರ ಆಯ್ಕೆ ಪ್ರಕ್ರಿಯೆ ಅರ್ಜಿ ಸಲ್ಲಿಸುವುದಕ್ಕೆ ಕೊನೆಯ ಬಂದ ಅರ್ಜಿಗಳನ್ನು ಪರಿಶೀಲನೆ




ಪರಿಶಿಷ್ಟ ಪಂಗಡದ ಪ್ರತಿಭಾವಂತ ಸಾಲಿಗೆ ಪ್ರತಿಷ್ಠಿತ ಶಾಲೆ ಯೋಜ ಅರ್ಹತಾ ಪರೀಕ್ಷೆ ಮೂಲಕ ಯನ್ನು ಮಾಡಲಾಗುವುದು ಮೇ.3 ದಿನ ವಾಗಿದ್ದು.ಮೇ.5 ರಂದು ನಡೆಸಲಾಗುವುದು ಮೇ.9 ರಂದು ಡಯಟ್ ಮೂಲಕ ಪ್ರವೇಶ ಪರೀಕ್ಷೆ,ಮೇ.13 ರಂದು ಫಲಿತಾಂಶ ಘೋಷಣೆ, ಮೇ. 17 ರಂದು ಕೌನ್ಸಲಿಂಗ್ ಮೂಲಕ ಆಯ್ಕೆ ,ಆಯ್ಕೆಯಾದವರು ಶಾಲೆಗೆ ದಾಖಲಾಗುವುದಕ್ಕೆ ಕೊನೆಯ ದಿನ ಮೇ.31 ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಮಹಾಲಿಂಗಪ್ಪ ಇಂಗಳದಾಳ್ ಪ್ರಕಟಣೆಯಲ್ಲಿ ಕೋರಿದ್ದಾರೆ.

ಮೊದಲನೇಯ ಪುಟದಿಂದ

## ವೀರಶೈವ ಲಿಂಗಾಯತ ಸಮಾಜವನ್ನು ಒಡೆಯುವ ಸರ್ಕಾರದ ಕ್ರಮವನ್ನ ವಿರೋಧಿಸಿ ಏ.28 ರಂದು ಪ್ರತಿಭಟನಾ ರ್‍ಯಾಲಿ

ವರದಿಯನ್ನು ಮೇ.5 ರಂದು ನಡೆಯಲಿರುವ ಸಚಿವ ಸಂಪುಟದಲ್ಲಿ ಅಂಗೀಕರಿಸಿ ಅನುಷ್ಠಾನಗೊಳಿಸುವ ಕುರಿತು ದಿನ ಪತ್ರಿಕೆಗಳಲ್ಲಿ ಮತ್ತು ದೃಶ್ಯ ಮಾದ್ಯಮಗಳಲ್ಲಿ ವರದಿಯಾಗಿದೆ. ಈ ಹಿಂದೆ ನಡೆಸಿದ ರಾಜ್ಯದ ಜಾತಿ ಜನಗಣತಿಯಲ್ಲಿ ಶೇ 27% ರಷ್ಟು ವೀರಶೈವ ಲಿಂಗಾಯತ ಸಮುದಾಯದವರು ಇರುತ್ತಾರೆ. ಆದರೆ ಈಗ ವೀರಶೈವ ಲಿಂಗಾಯತ ಹಾಗೂ ಉಪ ಪಂಗಡಗಳನ್ನು ಸೇರಿಸಿ ಶೇ 11% ರಷ್ಟು ಇದೆ ಎಂದು ವರದಿಯಾಗಿರುತ್ತದೆ. ಆದರೆ ನಮ್ಮ ಕರ್ನಾಟಕ ರಾಜ್ಯದಲ್ಲಿ ನಮ್ಮ ಸಮಾಜದ ಜನಗಣತಿ ತೆಗೆದುಕೊಂಡಲ್ಲಿ ಸುಮಾರು 2.50 ಕೋಟಿಗೂ ಮಿಗಿಲಾದ ಜನಸಂಖ್ಯೆ ಹೊಂದಿರುತ್ತದೆ. ಹೀಗಾಗಿ ನಮ್ಮ ಸಮಾಜಕ್ಕೆ ಘನಘೋರ ಅನ್ಯಾಯವಾಗಿದೆ. ಕಾರಣ ಈಗ ನಡೆಸಿದ ಜಾತಿ ಜನಗಣತಿಯನ್ನು ಒಪ್ಪಲು ನಾವು ಸಿದ್ಧರಿಲ್ಲ. ಅವರ ವರದಿ ಏನಾದರೂ ಅನುಷ್ಠಾನಗೊಂಡಲ್ಲಿ ಪ್ರಸ್ತುತ ಹಾಗೂ ನಮ್ಮ ಮುಂಬರುವ ಪೀಳಿಗೆಗೆ ರಾಜಕೀಯ, ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಬಹುದೊಡ್ಡ ಅನ್ಯಾಯವಾಗುತ್ತದೆ.

ಆದ್ದರಿಂದ ಜಿಲ್ಲೆಯ ಸಮಸ್ತ ವೀರಶೈವ ಲಿಂಗಾಯತ ಸಮಾಜದ ಬಾಂಧವರಿಗೆ ಈಗಿರುವ ಮತ್ತು ಮುಂದೆ ಆಗಬಹುದಾದ ಅನ್ಯಾಯವನ್ನು ಸರಿಪಡಿಸಲು ರಾಯಚೂರು ನಗರದ ಬೈಪಾಸ್ ರಸ್ತೆಯ ಶ್ರೀ ರೇಣುಕಾಚಾರ್ಯ ವೃತ್ತದ ಸಮೀಪದಲ್ಲಿರುವ ಹರ್ಷಿತಾ ಗಾರ್ಡನಲ್ಲಿ ಸಭೆ ಸೇರಿ ಅಲ್ಲಿಂದ ಪಾದಯಾತ್ರೆಯ ಮೂಲಕ ಮಾನ್ಯ ಜಿಲ್ಲಾಧಿಕಾರಿಗಳ ಮುಖಾಂತರ ಕರ್ನಾಟಕ ಸರ್ಕಾರಕ್ಕೆ ಪ್ರತಿಭಟನಾ ಮನವಿ ಪತ್ರ ಸಲ್ಲಿಸಲು ಹೆಚ್ಚಿನ ಸಂಖ್ಯೆಯಲ್ಲಿ ಸಮಾಜ ಬಾಂಧವರು ಆಗಮಿಸಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಹರಿಹರ ಪಾಟೀಲ್, ಶ್ರೀಧರ ಸ್ವಾಮಿ, ಜಗದೀಶ್ ಓತೂರು, ಶಿವಲಿಂಗಯ್ಯ ಸ್ವಾಮಿ, ಶಿವಶಂಕರಯ್ಯ ಸ್ವಾಮಿ, ರೇವಣಸಿದ್ದಯ್ಯ ಸ್ವಾಮಿ, ಅನುರಾಧ ಪಾಟೀಲ್, ಮಂಜುನಾಥ ಪಾಟೀಲ್, ಗುರುಸಿದ್ದಪ್ಪ ಕಣ್ಣೂರು, ಹೊಯ್ಸಳ ಸ್ವಾಮಿ ಹಾಗೂ ಇನ್ನು ಇತರರು ಉಪಸ್ಥಿತರಿದ್ದರು.

## ನೇಕಾರ ಒಕ್ಕೂಟದಿಂದ ದೇವರ ದಾಸಿಮಯ್ಯ ಜಯಂತಿ ಸಾಧಕರಿಗೆ ಸನ್ಮಾನ ಸಮಾರಂಭ–ಕೆ.ಈ.ನರಸಿಂಹ

ಜಿಲ್ಲಾ ಒಕ್ಕೂಟ ರಚನೆಯಾಗಿದೆ. ಇದೇ ದಾರಿಯಲ್ಲಿ ಮಾನ್ವಿ ತಾಲೂಕ ಘಟಕವೂ ಕಾರ್ಯನಿರ್ವಹಿಸುತ್ತದೆ. ಈ ನಿಟ್ಟಿನಲ್ಲೇ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಎಂದು ಹೇಳಿದ ಅವರು ಭಾನುವಾರ ನಡೆಯುವ ಸಮಾರಂಭದ ಭಾಗವಾಗಿ ಹಿರೇಭಾವಿ ಹತ್ತಿರ ಇರುವ ದೇವರ ದಾಸಿಮಯ್ಯ ವೃತ್ತದಿಂದ ಸಂಜೆ 4 ಗಂಟೆಗೆ ಕುಂಭ ಕಳಶ, ವಾದ್ಯ ದೊಂದಿಗೆ ದಾಸಿಮಯ್ಯನ ಭಾವಚಿತ್ರ ಮೆರವಣಿಗೆ ಆರಂಭಗೊಂಡು ತೊಗಟವೀರ ಚೌಡೇಶ್ವರಿ ದೇವಾಲಯಕ್ಕೆ ಬರುತ್ತದೆ. ನಂತರ ಸರಿಯಾಗಿ ಸಂಜೆ 6 ಗಂಟೆಗೆ ವೇದಿಕೆಯ ಕಾರ್ಯಕ್ರಮ ನಡೆಯುತ್ತದೆ. ಕಾರ್ಯಕ್ರಮದಲ್ಲಿ ಸನ್ಮಾನ್ಯ ಸಚಿವರಾದ ಎನ್.ಎಸ್.ಭೋಸರಾಜ್, ಶಾಸಕ ಹಂಪಯ್ಯ ನಾಯಕ. ಮಾಜಿ ಶಾಸಕರಾದ ಬಸನಗೌಡ ಬ್ಯಾಗವಾಟ್. ಗಂಗಾಧರ ನಾಯಕ, ರಾಜಾ ವೆಂಕಟಪ್ಪ ನಾಯಕ.ಪುರಸಭೆ ಅಧ್ಯಕ್ಷೆ ಶ್ರೀಮತಿ ಲಕ್ಷ್ಮಿ ಡಿ.ವೀರೇಶ್.ಒಕ್ಕೂಟದ ಜಿಲ್ಲಾಧ್ಯಕ್ಷ ಜಿ.ನಾಗರಾಜ್, ಹಿರಿಯರಾದ ಬಿ.ರಾಮದಾಸ್.ಜಿ.ಶಿವಶಂಕರ ಕುಮಾರ ಸಾಹುಕಾರ, ಗಂಗಾಧರ ಮಸ್ಕಿ. ಪಿ.ವಿ.ಮಾರ್ಕಂಡಯ್ಯ, ಶ್ರೀಮತಿ ಸರೋಜಾ, ಹೆಚ್.ಟಿ.ಅನ್ನಪೂರ್ಣ, ಜಿ.ವಿಜಯಲಕ್ಷ್ಮಿ ಸಾಹುಕಾರ ಸೇರಿದಂತೆ ಅನೇಕರು ಭಾಗವಹಿಸಲಿದ್ದಾರೆ. ಉಪನ್ಯಾಸಕ ಸಾಹಿತಿ ರಮೇಶಬಾಬು ಯಾಳಗಿ ಉಪನ್ಯಾಸ ನೀಡಲಿದ್ದಾರೆ. ಇದೇ ವೇಳೆ ಸಮುದಾಯದ 25 ಜನ ಸಾಧಕರನ್ನು ಸನ್ಮಾನಿಸಲಾಗುತ್ತದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೆ.ಈ.ನರಸಿಂಹ ವಹಿಸಲಿದ್ದಾರೆ. ಆದ್ದರಿಂದ ನೇಕಾರ ಸಮುದಾಯದ ಎಲ್ಲಾ ಬಂಧುಗಳು ಮತ್ತು ಸಾರ್ವಜನಿಕರು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಹೇಳಿದರು ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷರು ಜಿ. ನಾಗರಾಜ, ಬಿ. ರಾಮದಾಸ್, ಜಿ. ಶಿವಶಂಕರ ಕುಮಾರ ಸಾಹುಕಾರ್, ಮಸ್ಕಿ ಗಂಗದಾರ್, ರಮೇಶಬಾಬು ಯಾಳಗಿ, ಜಿ. ಪ್ರೇಮ್ ಶಂಕರ ಕುಮಾರ್, ಹೆಚ್ ಟಿ ಪ್ರಕಾಶಬಾಬು, ಹೆಚ್, ಸತೀಶ್ ಕುಮಾರ್, ಡಿ. ವಿರೇಶ್, ನಾಗರಾಜ ಕೊಳ್ಳಿ ಇದ್ದರು

## ಕರ್ನಾಟಕದಲ್ಲಿರುವ ಪಾಕ್ ಪ್ರಜೆಗಳ ಗಡಿಪಾರಿಗೆ ಕ್ರಮ

ನಮ್ಮ ರಾಜ್ಯಕ್ಕೆ ತಿಳಿಯದೇ ಇರುವ ಬಹಳಷ್ಟು ವಿಚಾರಗಳು ಕೇಂದ್ರ ಸರ್ಕಾರದ ಅರಿವಿಗಿರುತ್ತದೆ ಎಂದರು. ರಾಜ್ಯದ ಪೊಲೀಸರಿಗೆ ಮಾಹಿತಿ ಸಿಕ್ಕರೆ ಕೇಂದ್ರ ಗುಪ್ತಚರ ಹಾಗೂ ರಾಷ್ಟ್ರೀಯ ತನಿಖಾ ದಳಕ್ಕೆ ಮಾಹಿತಿ ನೀಡಲಾಗುವುದು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮನ್ವಯತೆಯಿಂದ ಕೆಲಸ ಮಾಡುತ್ತವೆ ಎಂದರು. ಇಸ್ರೋ, ಡಿಆರ್‌ಡಿಒ ಎಲ್ಲಾ ಕಡೆ ವಿಶೇಷ ಭದ್ರತಾ ವ್ಯವಸ್ಥೆಗಳಿವೆ. ರಾಜ್ಯದ ಪೊಲೀಸರು ಅದಕ್ಕೆ ಅಗತ್ಯ ಬೆಂಬಲ ನೀಡಿರುತ್ತಾರೆ ಎಂದು ಹೇಳಿದರು.

ಭದ್ರತಾ ದೃಷ್ಟಿಯಿಂದ ಕೇಂದ್ರ ಸರ್ಕಾರ ರಾಜತಾಂತ್ರಿಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಂಡಿದೆ. ಮತ್ತಷ್ಟು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸುತ್ತಿದ್ದೇವೆ. ಉಗ್ರರ ನೆಲೆಗಳನ್ನು ಧ್ವಂಸಪಡಿಸಲು ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸುವುದಾಗಿ ಹೇಳಿದರು. ಕಲಬುರಗಿಯಲ್ಲಿ ರಸ್ತೆಯುದ್ದಕ್ಕೂ ಪಾಕಿಸ್ತಾನದ ಧ್ವಜ ಹಾಕಿರುವ ಬಗ್ಗೆ ನನಗೆ ಮಾಹಿತಿ ಇಲ್ಲ, ಆ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆಯುತ್ತೇನೆ ಎಂದರು.

## ಅಪಾಯ ತಡೆಗಟ್ಟಲು ಮುಂಜಾಗೃತ ಕ್ರಮಗಳ ಬಗ್ಗೆ ಅರಿವು

ಇಲಾಖೆ ಬಳಸುವ ಉಪಕರಣಗಳ ಬಗ್ಗೆ ಮಾಹಿತಿ ಜೊತೆಗೆ ಸಾರ್ವಜನಿಕರು ಕೈಗೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಕುರಿತು ತಿಳಿಸಿದರು. ನಂತರ ಅಗ್ನಿ ಶಾಮಕ ದಳದ ಸಿಬ್ಬಂದಿಗಳು ಅಣುಕು ಪ್ರದರ್ಶನ ತೋರಿಸುವುದರ ಮೂಲಕ ವೈದ್ಯರಿಗೆ ಹಾಗೂ ಅಧಿಕಾರಿ ಸಿಬ್ಬಂದಿಗಳಿಗೆ ಹಾಗೂ ನೆರೆದಿದ್ದ ಸಾರ್ವಜನಿಕರಿಗೆ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಅಧೀಕ್ಷಕಾರಾದ ಡಾ.ಸಂತೋಶ್, ಜಿಲ್ಲಾ ವಿಬಿಡಿ ಸಲಹೆಗಾರರಾದ ಶ್ರೀ ಬಸವರಾಜ್ ಕಾಂತ, ಹಿರಿಯ ಆರೋಗ್ಯ ನಿರಕ್ಷಾಣಾದಿಕಾರಿಗಳಾದ ಶ್ರೀ ಹಿರಾಲಾಲ್ ಚೌವ್ಹಾಣ, ಆರೋಗ್ಯ ನಿರಕ್ಷಣಾಧಿಕಾರಿಗಳಾದ ಶ್ರೀ ಖುರ್ಶೀದ್, ಶ್ರೀ ಉಮೇಶ್, ಶ್ರೀ ಕಾಳಪ್ಪ ಪತ್ತಾರ, ಸಂತೋಶ್ ಜಾದವ್, ಎಟಿಎಗಳಾದ ಶ್ರೀ ವಿ.ಎಮ್.ಪಾಟಿಲ್, ಶ್ರೀ ಖಲಿಮುದ್ದಿನ್, ಹಾಗೂ ಆಸ್ಪತ್ರೆಯ ವೈದ್ಯರು, ಸಿಬ್ಬಂದಿಗಳು, ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇನ್ನಿತರರು ಉಪಸ್ಥಿತರಿದ್ದರು. ಜಿಲ್ಲಾ ಆರೊಗ್ಯ ಶಿಕ್ಷಣಾಧಿಕಾರಿಗಳಾದ ತುಳಸಿರಾಮ ಚವ್ಹಾಣ ಸ್ವಾಗತ ಹಾಗೂ ವಂದನಾರ್ಪಣೆ ವಂದಿಸಿದರು.

## ಅನುಭವ ಮಂಟಪ ರಥಕ್ಕೆ ಭವ್ಯ ಸ್ವಾಗತ




**ಕಲಬುರಗಿ,ಏ.26:** ಬಾಗಲಕೋಟೆಯ ಕೂಡಲ ಸಂಗಮದಲ್ಲಿ ಇದೇ ಏಪ್ರಿಲ್ 29 ಮತ್ತು 30 ರಂದು ಎರಡು ದಿನಗಳ ಕಾಲ "ಅನುಭವ ಮಂಟಪ–ಬಸವಾದಿ ಶರಣರ ವೈಭವ" ಕಾರ್ಯಕ್ರಮ ಆಯೋಜಿಸಿದ ಪ್ರಯುಕ್ತ ಈ ಬಗ್ಗೆ ನಾಡಿನಾದ್ಯಂತ ವ್ಯಾಪಕ ಪ್ರಚೂರಪಡಿಸಲು ಹೊರಟಿರುವ ರಥಯಾತ್ರೆಯು ಗುರುವಾರ ಸಂಜೆ ಬೀದರ ದಿಂದ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಇಲ್ಲಿನ ಜಗತ್ ವೃತ್ತದಲ್ಲಿ ಜಿಲ್ಲಾಡಳಿತದಿಂದ ಭವ್ಯ ಸ್ವಾಗತ ನೀಡಲಾಯಿತು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಅನೇಕ ಗಣ್ಯರು ರಥಕ್ಕೆ ಪೂಜೆ ಸಲ್ಲಿಸಿದಲ್ಲದೆ ಬಸವಣ್ಣ ಸೇರಿದಂತೆ ರಥದಲ್ಲಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಯೇಸು ಕ್ರಿಸ್ತ, ನಾರಾಯಣ ಗುರು, ಶಿವಶರಣೆ ಅಕ್ಕ ಮಹಾದೇವಿ, ಬುದ್ಧ, ಸಂತ ಶಿಸುನಾಳ ಶರೀಫ್, ಗುರುನಾನಕ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಡೊಳ್ಳು,ಲಂಬಾಣಿ ನೃತ್ಯ ಮೂಲಕ ವರ್ಣರಂಜಿತವಾಗಿ ರಥವನ್ನು ಬರಮಾಡಿಕೊಳ್ಳಲಾಯಿತು.

ವಿಧಾನ ಪರಿಷತ್ ಮಾಜಿ ಶಾಸಕ ಅಮರನಾಥ ಪಾಟೀಲ, ಕಲಬುರಗಿ ತಹಶೀಲ್ದಾರ ಕೆ.ಆನಂದಶೀಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ರಾಷ್ಟ್ರೀಯ ಬಸವದಳ ಘಟಕದ ಜಿಲ್ಲಾಧ್ಯಕ್ಷ ಆರ್.ಜಿ.ಶೆಟಗಾರ, ಪ್ರಮುಖರಾದ ಡಾ.ಸುಧಾ ಹಾಲಕಾಯಿ, ರಾಜಶೇರಖ್ ಯಂಕಂಚಿ, ಶಾಂತಪ್ಪ ಪಾಟೀಲ, ರವೀಂದ್ರ ಶಾಬಾದಿ, ಅಶೋಕ ಗೂಳಿ, ಮನೋಹರ ಜೀವಣಗಿ, ಪ್ರಭುಲಿಂಗ ಮಹಾಗಾಂವಕರ್, ಎಸ್.ಸಿ–ಎಸ್.ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬ್ಬಿ ಸೇರಿದಂತೆ ಬಸವಾದಿ ಶರಣರ ಅನುಯಾಯಿಗಳು ಇದ್ದರು.

## ವ್ಯವಹಾರದಲ್ಲಿ ನಷ್ಟ: ನೇಣು ಹಾಕಿಕೊಂಡು ಯುವಕ ಆತ್ಮಹತ್ಯೆ




**ಕಲಬುರಗಿ,ಏ.26–**ಸ್ಟೇಜ್ ಡೆಕೊರೇಶನ್ ವ್ಯವಹಾರದಲ್ಲಿ ಆದ ನಷ್ಟದಿಂದ ಮನನೊಂದು ಯುವಕನೊಬ್ಬ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಕೇಂದ್ರ ಬಸ್ ನಿಲ್ದಾಣ ಹತ್ತಿರದ ಲಾಡ್ಜ್ ಒಂದರಲ್ಲಿ ನಡೆದಿದೆ. ನಗರದ ಜಗತ್ ಬಡಾವಣೆಯ ಸಿದ್ರಾಮಗೋಳ ಏರಿಯಾದ ಪ್ರಶಾಂತ ತಂದೆ ದಿ.ಕಾಶಿನಾಥ ಕೊಳಾರಿ (21) ಆತ್ಮಹತ್ಯೆ ಮಾಡಿಕೊಂಡಿರುವ ಯುವಕ.

ಪ್ರಶಾಂತ ಹೂವಿನ ಸ್ಟೇಜ್ ಡೆಕೊರೇಶನ್ ಕೆಲಸ ಮಾಡುತ್ತಿದ್ದ. ವ್ಯವಹಾರದಲ್ಲಿ ನಷ್ಟ ಆಗಿದ್ದರಿಂದ ಮನನೊಂದು ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಮೃತನ ತಾಯಿ ಶರಣಮ್ಮಾ ಕಾಶಿನಾಥ ಕೊಳಾರಿ ಅವರು ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

## ಬಿಕೋ ಎನ್ನುತ್ತಿದೆ ಭೂಲೋಕದ ಸ್ವರ್ಗ ಜಮ್ಮು–ಕಾಶ್ಮೀರ



**ಬೆಂಗಳೂರು,ಏ.26–** ಪಹಲ್ಗಾವ್ ದಾಳಿಯ ಬಳಿಕ ಜಮು–ಕಾಶ್ಮೀರ ಪ್ರವಾಸಕ್ಕಾಗಿ ಬುಕ್ ಮಾಡಲಾಗಿದ್ದ ಲಕ್ಷಾಂತರ ಟಿಕೆಟ್‌ಗಳು ರದ್ದುಗೊಳ್ಳುತ್ತಿದ್ದು, ಸಾವಿರಾರು ಕೋಟಿ ರೂ.ಗಳ ಆದಾಯ ಕಣಿವೆ ರಾಜ್ಯಕ್ಕೆ ಖೋತಾವಾಗುತ್ತಿದೆ. ಜೊತೆಗೆ ಬಂಡವಾಳ ಹೂಡಿಕೆಯ ಪ್ರಸ್ತಾವನೆ ನೆನೆಗುದಿಗೆ ಬೀಳುವ ಆತಂಕ ಎದುರಾಗಿದೆ. ಸೇವಾವಲಯ ಮತ್ತು ಪ್ರವಾಸೋದ್ಯಮವೇ ಜಮು–ಕಾಶ್ಮೀರ ಆದಾಯದ ಪ್ರಮುಖ ಭಾಗವಾಗಿತ್ತು. ಪ್ರವಾಸಿಗರಿಂದ ವಾರ್ಷಿಕ 12 ಸಾವಿರ ಕೋಟಿ ರೂ.ಗೂ ಹೆಚ್ಚಿನ ಆದಾಯ ಸೃಷ್ಟಿಯಾಗುತ್ತಿದ್ದು, ತೋಟಗಾರಿಕಾ ವಲಯ ಸರಿಸುಮಾರು 10 ಸಾವಿರ ಕೋಟಿ ರೂ.ಗಳ ವಹಿವಾಟು ನಡೆಸುತ್ತಿದೆ. ಸೇವಾವಲಯ ಜಿಎಸ್‌ಡಿಪಿಯಲ್ಲಿ ಶೇ.41ರಷ್ಟು ಪಾಲು ಹೊಂದಿದೆ. ಪ್ರವಾಸೋದ್ಯಮವೊಂದರಿಂದಲೇ 2.50 ಲಕ್ಷ ಉದ್ಯೋಗಗಳು ಸೃಷ್ಟಿಯಾಗಿದ್ದವು. ಈಗ ಭಯೋತ್ಪಾದಕರ ದಾಳಿಯಿಂದಾಗಿ ಏಕಾಏಕಿ ಎಲ್ಲವೂ ನೆಲಕಚ್ಚಿದೆ. ಅಷ್ಟೂ ಮಂದಿ ನಿರುದ್ಯೋಗಿಗಳಾಗಿದ್ದು, ಒಪ್ಪತ್ತಿನ ಊಟಕ್ಕೂ ಪರದಾಡುವ ಪರಿಸ್ಥಿತಿ ಎದುರಾಗಿದೆ.ಕೋವಿಡ್‌ನಂತಹ ಕಠಿಣ ಸವಾಲಿನ ಬಳಿಕ ಜಮು–ಕಾಶ್ಮೀರದ ಪ್ರವಾಸೋದ್ಯಮ ಪುಟಿದೆದ್ದಿತ್ತು. ಪ್ರವಾಸಿಗರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಗಣನೀಯವಾಗಿ ಏರಿಕೆ ಕಂಡಿದ್ದು ಆದಾಯವು ಸಮೃದ್ಧಿಯಾಗಿತ್ತು.2020 ರಲ್ಲಿ 34 ಲಕ್ಷ ಪ್ರವಾಸಿಗರು ಮಾತ್ರ ಜಮು–ಕಾಶ್ಮೀರಕ್ಕೆ ಭೇಟಿ ನೀಡಿದ್ದರು. 2021 ರಲ್ಲಿ ಅದು 1.13 ಕೋಟಿಗೆ ಹೆಚ್ಚಾಗಿತ್ತು. 2022 ರಲ್ಲಿ 1.88 ಕೋಟಿ, 2023 ರಲ್ಲಿ 2.11 ಕೋಟಿ, 2024 ರಲ್ಲಿ 2.36 ಕೋಟಿ ಜನ ಭೇಟಿ ನೀಡಿದ್ದರು. ಕಳೆದ ವರ್ಷದಲ್ಲಿ 65 ಸಾವಿರ ವಿದೇಶಿಗರು ಆಗಮಿಸಿದ್ದರು. ಗುಲಾರ್ಗ್, ಸೋನಾ ಮಾರ್ಗ್, ಪಹಲ್ಗಾಮ್, ದಾಲ್‌ಲೇಖ್ ಪ್ರದೇಶಗಳು ತುಂಬಿತುಳುಕುತ್ತಿದ್ದವು. ಗುಲಾರ್ಗ್ ಒಂದರಲ್ಲೇ ಕಳೆದ ವರ್ಷ 103 ಕೋಟಿ ರೂ. ಆದಾಯ ಸೃಷ್ಟಿಯಾಗಿತ್ತು.ಈ ವರ್ಷ ಒಟ್ಟು ಪ್ರವಾಸಿಗರ ಸಂಖ್ಯೆ 3 ಕೋಟಿ ದಾಟುವ ನಿರೀಕ್ಷೆಯಿತ್ತು. ಮುಂದಿನ 5 ವರ್ಷದ ವೇಳೆಗೆ ಜಮು–ಕಾಶಿ?ರದ ಪ್ರವಾಸೋದ್ಯಮದ ಆದಾಯ 12 ಸಾವಿರ ಕೋಟಿಗಳಿಂದ ದುಪ್ಪಟ್ಟಾಗಿ ಸುಮಾರು 25 ರಿಂದ 30 ಸಾವಿರ ಕೋಟಿಗಳಾಗುವ ಲೆಕ್ಕಾಚಾರವಿತ್ತು. ಜಮ್ಮು–ಕಾಶ್ಮೀರದಲ್ಲಿನ ಕಾನೂನು ಸುವ್ಯವಸ್ಥೆ ಮತ್ತು ಶಾಂತಿ ಸ್ಥಾಪನೆ ಪ್ರವಾಸಿಗರ ವಿಶ್ವಾಸವನ್ನು ಹೆಚ್ಚಿಸಿತ್ತು.370ನೇ ವಿಧಿಯನ್ನು ರದ್ದುಗೊಳಿಸಿದ್ದು, 2023 ರ ಮೇನಲ್ಲಿ ಭಾರತದಲ್ಲಿ ನಡೆದ ಸಾರ್ಕ್ ಶೃಂಗಸಭೆಯ ಪ್ರವಾಸೋದ್ಯಮ ಸಭೆಯನ್ನು ಕಾಶಿ?ರದಲ್ಲಿ ಆಯೋಜಿಸಿ ಯಶಸ್ವಿಗೊಳಿಸಿತ್ತು ಜೊತೆಗೆ ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಂಡು ರಮಣೀಯ ಪ್ರವಾಸಿತಾಣಗಳ ಬಗ್ಗೆ ಪ್ರಚಾರ ಮಾಡಿದ್ದು ಸೇರಿದಂತೆ ಹಲವಾರು ಉಪಕ್ರಮಗಳು ಜಮು–ಕಾಶ್ಮೀರದ ಆರ್ಥಿಕತೆಯನ್ನು ಉತ್ತೇಜಿಸುವಂತೆ ಮಾಡಿತು.ಪ್ರವಾಸೋದ್ಯಮದಲ್ಲಿ ಹೋಟೆಲ್‌ಗಳು, ಹೌಸ್‌ಬೋಟ್‌ಗಳು, ಕ್ಯಾಬ್, ಪೋನಿವಾಲಾಸ್, ಗೈಡ್‌ಗಳು, ಪ್ರವಾಸೋದ್ಯಮ ನಿರ್ವಾಹಕರು, ಕರಕುಶಲ ವಸ್ತುಗಳು, ಶಾಲು, ಕಾರ್ಪೆಟ್, ಮರಕೆತ್ತನೆ ಕೆಲಸಗಾರರು, ವ್ಯಾಪಾರಿಗಳು ಸೇರಿದಂತೆ ಅನೇಕರು ಜೀವನ ಕಟ್ಟಿಕೊಂಡಿದ್ದರು. ಇವರೆಲ್ಲರ ಆದಾಯ ಮೂಲವೇ ಪ್ರವಾಸೋದ್ಯಮವಾಗಿತ್ತು.ಕೇಂದ್ರ ಸರ್ಕಾರದ ಬಿಗಿಹಿಡಿತ ಹಾಗೂ ಸಕಾರಾತಕ ಕ್ರಮಗಳಿಂದಾಗಿ 1.63 ಲಕ್ಷ ಕೋಟಿ ರೂ. ಹೂಡಿಕೆ ಪ್ರಸ್ತಾವನೆಗಳು ಬಂದಿದ್ದವು. ಇದರಿಂದ ಸುಮಾರು 6 ಲಕ್ಷ ಮಂದಿಗೆ ಉದ್ಯೋಗ ಸೃಷ್ಟಿಯಾಗುವ ಲೆಕ್ಕಾಚಾರಗಳಿದ್ದವು. ಬಹುತೇಕ ಪ್ರಸ್ತಾವನೆಗಳು ಆರಂಭಿಕ ಹಂತದಲ್ಲಿದ್ದವು. ಇನ್ನೇನು ಕಣಿವೆ ರಾಜ್ಯದ ದಿಕ್ಕು ಬದಲಾಗುತ್ತಿದೆ ಎನ್ನುವ ಹಂತದಲ್ಲಿ ಉಗ್ರರ ದುಷ್ಕೃತ್ಯ ಎಲ್ಲಾ ಪ್ರಯತ್ನಗಳನ್ನೂ ನೀರಿನಲ್ಲಿ ಹುಣಿಸೆಹಣ್ಣು ತೊಳೆದಂತೆ ಮಾಡಿದೆ.ರಾಷ್ಟ್ರಿ?ಯ ಆರ್ಥಿಕ ಬೆಳವಣಿಗೆ ಶೇ.7.7 ರಷ್ಟಿದ್ದರೆ, ಜಮು–ಕಾಶ್ಮೀರದ ಬೆಳವಣಿಗೆ ಶೇ.7.81ರಷ್ಟಿದ್ದು, ದೇಶಕ್ಕಿಂತಲೂ ಕಣಿವೆ ರಾಜ್ಯದ ಸರಾಸರಿ ಕೆಲ ಹೆಜ್ಜೆಗಳಷ್ಟು ಮುಂದಿತ್ತು. ಏಪ್ರಿಲ್ 22 ರ ಭಯಾನಕ ದಾಳಿ ದೇಶವನ್ನಷ್ಟೆ? ಅಲ್ಲ ಅಂತಾರಾಷ್ಟ್ರಿ?ಯ ಮಟ್ಟದಲ್ಲೂ ಆತಂಕ ಸೃಷ್ಟಿಸಿದೆ. ಅದರಲ್ಲೂ ಧರ್ಮಾಧರಿತ ಹತ್ಯೆಗಳು ಶಾಂತಿ ಹಾಗೂ ನೆಮದಿಗಾಗಿ ತೆರಳುತ್ತಿದ್ದ ಪ್ರವಾಸಿಗರನ್ನು ದುಗುಡಕ್ಕಿ?ಡು ಮಾಡಿದೆ.ಏ.22ರ ದಾಳಿಯ ಬಳಿಕ ಬೆಂಗಳೂರು ಸೇರಿದಂತೆ ರಾಷ್ಟ್ರಾದ್ಯಂತ ಜಮು–ಕಾಶ್ಮೀರದ ಪ್ರವಾಸದ ಟಿಕೆಟ್‌ಗಳು ರದ್ದುಗೊಳ್ಳುತ್ತಿವೆ. ಪ್ರವಾಸಿಗರ ಸಂಖ್ಯೆ ಸಂಪೂರ್ಣ ಸ್ಥಗಿತಗೊಂಡಿದೆ. ದಾಲ್‌ಲೇಖ್‌ನಲ್ಲಿದ್ದ 1,500 ಹೌಸ್‌ಬೋಟ್‌ಗಳು ತುಕ್ಕು ಹಿಡಿಯಲಾರಂಭಿಸಿದ್ದು, 3 ಸಾವಿರ ಕೊಠಡಿಗಳು ಖಾಲಿ ಹೊಡೆಯುತ್ತಿವೆ.ಜಮು–ಕಾಶ್ಮೀರದ ಕಡೆಗೆ ಮುಖ ಮಾಡಿದ್ದವರು ಭಯೋತ್ಪಾದಕರ ದಾಳಿಯಿಂದ ರಾಜಸ್ಥಾನ ಹಾಗೂ ಇತರ ರಾಜ್ಯಗಳ ಪ್ರವಾಸತಾಣಗಳಿಗೆ ಮಾರ್ಗ ಬದಲಿಸಿಕೊಳ್ಳುತ್ತಿದ್ದಾರೆ. ಇತ್ತೀಚೆಗೆ ನಡೆದ ವಿಧಾನಸಭಾ ಚುನಾವಣೆಯಲ್ಲಿ ರಾಜಕೀಯ ಸ್ಥಿತ್ಯಂತರವಾಗಿದ್ದು, ರಾಜ್ಯಸರ್ಕಾರದ ಕೆಲವು ನಿರ್ಧಾರಗಳು ಪ್ರವಾಸಿಗರ ಸುರಕ್ಷತೆಯ ಬಗ್ಗೆ ಗೊಂದಲ ಉಂಟುಮಾಡಿವೆ.ಗಡಿನುಸುಳುವಿಕೆ ನಿಯಂತ್ರಣದಲ್ಲಿದ್ದರೂ ದೇಶೀಯವಾದ ಪ್ರಚೋದನಾತಕ ಚಟುವಟಿಕೆಗಳು ಹೆಚ್ಚುತ್ತಿವೆ ಎಂಬ ಆರೋಪಗಳಿವೆ. ಅದನ್ನು ದೃಢೀಕರಿಸುವಂತೆ ಪಹಲ್ಗಾಮ್‌ನಲ್ಲಿ ಉಗ್ರರು ರಾಜಾರೋಷವಾಗಿ ಬಂದು 26 ಮಂದಿಯ ಜೀವಹತ್ಯೆ ಮಾಡಿ ಅಷ್ಟೆ? ರಾಜಾರೋಷವಾಗಿ ವಾಪಸ್? ಹೋಗಿದ್ದು ಸಾಮಾಜಿಕ ಜಾಲತಾಣಗಳಲ್ಲಿ ತಾವು ಸಾಧನೆ ಮಾಡಿದ್ದೇವೆ ಎಂಬಂತೆ ವಿಡಿಯೋಗಳನ್ನು ಹರಿಯಬಿಡುತ್ತಿದ್ದಾರೆ.ಕೇಂದ್ರಸರ್ಕಾರ ಮತ್ತೆ ಕಣಿವೆ ರಾಜ್ಯದಲ್ಲಿ ಶಾಂತಿ ನೆಲೆಸಿ ಪ್ರವಾಸಿಗರ ವಿಶ್ವಾಸ ಗಿಟ್ಟಿಸಲು ಹಗಲಿರುಳು ಶ್ರಮಿಸುವಂತಾಗಿದೆ.

## ಮಹದೇಶ್ವರ ಬೆಟ್ಟದಲ್ಲಿ ಪಾನನಿಷೇಧ

**ಚಾಮರಾಜನಗರ, ಏ. 26:** ನಿನ್ನೆ ನಡೆದ ಮಲೆಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ ಸಭೆಯಲ್ಲಿ ಮಹದೇಶ್ವರ ಬೆಟ್ಟದಲ್ಲಿ ಶುಚಿತ್ವ, ಪಾನನಿಷೇಧ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೊಳಿಸಲು ನಿರ್ಣಯ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಶ್ರೀ ಮಲೆ ಮಹದೇಶ್ವರ ಬೆಟ್ಟದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿ ಮೈಸೂರು ವಿಭಾಗದ ಚಾಮರಾಜನಗರ ಜಿಲ್ಲೆ ಹಿಂದುಳಿದ ಜಿಲ್ಲೆಯಾಗಿದ್ದು, ಈ ಭಾಗಕ್ಕೆ ವಿಶೇಷ ಗಮನ ನೀಡುವ ನಿಟ್ಟಿನಲ್ಲಿ ಸಚಿವ ಸಂಪುಟ ಸಭೆ ನಡೆಸಲಾಗಿದೆ. ಚಾಮರಾಜನಗರಕ್ಕೆ ಬಂದರೆ ಅಧಿಕಾರ ಹೋಗುತ್ತದೆ ಎಂಬುದು ಸತ್ಯಕ್ಕೆ ದೂರವಾದ ಮಾತು. ಇಂತಹ ಮೌಢ್ಯಗಳೇ ಸಮಾಜದ ಪ್ರಗತಿಗೆ ಮಾರಕವಾಗಿದೆ. ನಾನು ಇದುವರೆಗೆ ಸುಮಾರು 20 ಬಾರಿ ಜಿಲ್ಲೆಗೆ ಬಂದಿದ್ದು, ಎರಡನೇ ಬಾರಿ ಮುಖ್ಯಮಂತ್ರಿಯಾಗಿದ್ದೇನೆ ಎಂದರು.

ಮಲೆಮಹದೇಶ್ವರ ಅಭಿವೃದ್ಧಿಗೆ ನಿರ್ಣಯ: ಮಲೆಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ ಸಭೆ ನಿನ್ನೆ ನಡೆಸಲಾಗಿದೆ. ಈ ಪ್ರದೇಶದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು, ಮದ್ಯನಿಷೇದವಾಗಬೇಕು, ದೇವಸ್ಥಾನದ ವಿತರಿಸಲಾಗುವ ಲಾಡು ಪ್ರಸಾದವನ್ನು ಗುಣಮಟ್ಟದಲ್ಲಿ ಹಾಗೂ ಕಡಿಮೆ ದರದಲ್ಲಿ ನೀಡುವ ಬಗ್ಗೆ ಕ್ರಮ ಕೈಗೊಳ್ಳಬೇಕು. ಮಲೈಮಹದೇಶ್ವರ ಸನ್ನಿಧಿಯ ಸುತ್ತಮುತ್ತಲ ಪ್ರದೇಶದಲ್ಲಿ ಮೂಲಸೌಕರ್ಯ ಅಭಿವೃದ್ಧಿಪಡಿಸಬೇಕೆಂದು ನಿರ್ಣಯಿಸಲಾಗಿದೆ ಎಂದರು.



ಚಾಮರಾಜನಗರ ಜಿಲ್ಲೆ ಮಲೆಮಹದೇಶ್ವರ ಬೆಟ್ಟಕ್ಕೆ ಇಂದು ಭೇಟಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಜನರತ್ತ ಕೈಬೀಸುತ್ತಿರುವುದು. ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಮತ್ತಿತರ ಕಾಂಗ್ರೆಸ್ ಮುಖಂಡರುಗಳು ಇದ್ದಾರೆ.

ಪ್ರಧಾನಿ ಮೋದಿಯವರು ಕಾಶ್ಮೀರ ಉಗ್ರರ ದಾಳಿಗೆ ತಕ್ಕ ಪ್ರತ್ಯುತ್ತರ ನೀಡುವುದಾಗಿ ಹೇಳಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ದಾಳಿಯಲ್ಲಿ ಕೇಂದ್ರ ಗುಪ್ತಚರ ಇಲಾಖೆಯ ವೈಫಲ್ಯವಿರುವುದು ಕಾಣುತ್ತಿದೆ ಎಂದರು.

## ಏ. 30 ಸಂಸತ್ ಭವನದಲ್ಲಿ ಬಸವಣ್ಣ ಜಯಂತಿ

**ಬೆಂಗಳೂರು, ಏ. 26–** ವಿಶ್ವಗುರು, ಸಮಾನತೆಯ ಹರಿಕಾರ ಬಸವಣ್ಣನವರ ಜಯಂತಿಯನ್ನು ಏ. 30 ರಂದು ದೆಹಲಿಯ ಸಂಸತ್ ಭವನದಲ್ಲಿ ಆಯೋಜಿಸಲಾಗಿದೆ ಎಂದು ಕೇಂದ್ರದ ರೈಲ್ವೆ ಖಾತೆ ಸಚಿವ ವಿ. ಸೋಮಣ್ಣ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಮಂತ್ರಿಯಾಗಿ ನಾನು ಹತ್ತು ತಿಂಗಳಾಗಿದೆ. ಸಂಸತ್ ಭವನದಲ್ಲಿ ಬಸವಜಯಂತಿ ಆಚರಣೆ ಮಾಡುವ ನಿಟ್ಟಿನಲ್ಲಿ ಸಣ್ಣ ಪ್ರಯತ್ನ ಮಾಡಿದ್ದೇನೆ. ಈ ತಿಂಗಳ 30 ರಂದು ಲೋಕಸಭೆಯ ಸ್ಪೀಕರ್ ಹಾಗೂ ಕೇಂದ್ರ ಸಚಿವರ ಸಮ್ಮುಖದಲ್ಲಿ ಸಂಸತ್ ಭವನದಲ್ಲಿ ಬಸವಜಯಂತಿ ಆಚರಣೆ ಮಾಡುತ್ತೇವೆ ಎಂದರು. ಸಂಸತ್ ಭವನದಲ್ಲಿ ಬಸವ ಜಯಂತಿ ಆಚರಣೆಗ ಪ್ರಧಾನಿ ಮೋದಿ ಅವರು ಬೆಂಬಲ ನೀಡಿದ್ದಾರೆ. ಮೋದಿ ಅವರು ಪ್ರಧಾನಿಯಾಗಿ ಬಸವಣ್ಣನವರಿಗೆ ನೀಡಿರುವ ಗೌರವವನ್ನು ಇದುವರೆಗೂ ಯಾರೂ ಕೊಟ್ಟಿರಲಿಲ್ಲ. ಅವರು ಸಹ ಬಸವ ತತ್ವದ ಆದರ್ಶಗಳನ್ನು ಕೊಂಡಾಡಿದ್ದಾರೆ ಎಂದರು. ಪ್ರತಿವರ್ಷ ಕರ್ನಾಟಕದಲ್ಲಿ ನಡೆದಂತೆ ಇನ್ನು ಮುಂದೆ ರಾಷ್ಟ್ರದ ರಾಜಧಾನಿ ದೆಹಲಿಯಲ್ಲಿ ಬಸವಜಯಂತಿ ನಡೆಯುತ್ತದೆ. ಬಸವಣ್ಣನವರು ಇಡೀ ಸಮುದಾಯದ ನಾಯಕರು.




ಕರ್ನಾಟಕದಲ್ಲಿ ಕಿತ್ತೂರು ರಾಣಿ ಚನ್ನಮ್ಮ, ಬಸವಣ್ಣ ರವರು ದೇಶಕ್ಕೆ ಮಾದರಿ. ಹಾಗಾಗಿ ಸಂಸತ್‌ನಲ್ಲಿ ಕಿತ್ತೂರು ರಾಣಿ ಚನ್ನಮ್ಮ ಹಾಗೂ ಬಸವಣ್ಣನವರ ಜಯಂತಿ ಆಚರಣೆಗೆ ನಿರ್ಧಾರ ಮಾಡಲಾ ಗಿದೆ. ಇದಕ್ಕೆ ನಾನು ಪ್ರಧಾನಿ ಮೋದಿ ಹಾಗೂ ಲೋಕಸಭೆಯ ಸ್ಪೀಕರ್ ಓಂಪ್ರಕಾಶ್ ಬಿರ್ಲಾ ಅವರಿಗೆ ಅಭಿನಂದನೆ ಸಲ್ಲಿಸು ತ್ತೇನೆ ಎಂದು ಸಚಿವ ಸೋಮಣ್ಣ ಹೇಳಿದರು.

ಯುವ ಮಾರ್ಗ
ಶನಿವಾರ: 26–04–2025

# ತಿಂಗಳಾಂತ್ಯದವರೆಗೂ ಮುಂದುವರೆಯಲಿದೆ ಪೂರ್ವ ಮುಂಗಾರು ಮಳೆ



**ಬೆಂಗಳೂರು, ಏ.26–** ರಾಜ್ಯದಲ್ಲಿ ಏಪ್ರಿಲ್ ತಿಂಗಳ ಅಂತ್ಯದವರೆಗೂ ಪೂರ್ವ ಮುಂಗಾರು ಮಳೆ ಮುಂದುವರೆಯುವ ಮುನ್ಸೂಚನೆಗಳಿವೆ. ಈ ತಿಂಗಳ ಆರಂಭದಿಂದಲೂ ಚದುರಿದಂತೆ ರಾಜ್ಯದ ಹಲವೆಡೆ ಮಳೆಯಾಗುತ್ತಿದೆ. ಕರಾವಳಿ, ಮಲೆನಾಡು, ದಕ್ಷಿಣ ಹಾಗೂ ಉತ್ತರ ಒಳನಾಡು ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಅಲ್ಲಲ್ಲಿ ಹಗುರದಿಂದ ಸಾಧಾರಣ ಮಳೆಯಾಗಿದೆ.

ಏಪ್ರಿಲ್ ತಿಂಗಳಿನಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ಹೀಗಾಗಿ ಕೃಷಿ ಚಟುವಟಿಕೆಗಳಿಗೆ ಚೈತನ್ಯ ಸಿಕ್ಕಂತಾಗಿದೆ. ವಾತಾವರಣದಲ್ಲಿ ಆಗಾಗ್ಗೆ ಸಾಕಷ್ಟು ಬದಲಾವಣೆಯಾಗುತ್ತಿರುವ ಪರಿಣಾಮ ಬೇಸಿಗೆ ಮಳೆ ಬಿಟ್ಟುಬಿಟ್ಟು ಬರುತ್ತಿದೆ ಎಂದು ಹವಾಮಾನ ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ರಾಜ್ಯದ ಒಳನಾಡಿನಲ್ಲಿ 0.9 ಕಿ.ಮೀ. ಎತ್ತರದಲ್ಲಿ ಟ್ರಫ್ ನಿರ್ಮಾಣವಾಗಿರುವ ಪರಿಣಾಮ ಭಾಗಶಃ ಮೋಡ ಕವಿದ ವಾತಾವರಣ ಕಂಡುಬರಲಿದ್ದು, ಸಂಜೆ ಅಥವಾ ರಾತ್ರಿ ವೇಳೆ ಕೆಲವೆಡೆ ಮಳೆಯಾಗಲಿದೆ ಎಂದು ಭಾರತೀಯ ಹವಾ ಮಾನ ಇಲಾಖೆಯ ಬೆಂಗಳೂ ರು ಪ್ರಾದೇಶಿಕ ಕೇಂದ್ರದ ನಿರ್ದೇಶಕ ಸಿ.ಎಸ್ .ಪಾಟೀಲ್ ತಿಳಿಸಿದ್ದಾರೆ.ಕರಾವಳಿ, ಮಲೆನಾಡು, ಉತ್ತರ ಹಾಗೂ ದಕ್ಷಿಣ ಒಳನಾಡಿನ ಹಲವೆಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಕೆಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗಲಿದೆ. ಅಲ್ಲದೆ, ಗಂಟೆಗೆ 40 ರಿಂದ 50 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಯಿದ್ದು, ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರಿಗೆ ಮಾಹಿತಿ ನೀಡಿದ್ದಾರೆ. ಬೇಸಿಗೆ ಮಳೆ ಏಪ್ರಿಲ್ ಅಂತ್ಯದವರೆಗೂ ಮುಂದುವರೆ ಯಲಿದೆ. ರಾಜ್ಯದ ಬಹುತೇಕ ಎಲ್ಲಾ ಭಾಗಗಳಲ್ಲೂ ಮಳೆಯಾ ಗುವ ಸಾಧ್ಯತೆಗಳಿವೆ. ಆದ ರೆ ವ್ಯಾಪಕ ಪ್ರಮಾಣದಲ್ಲಿ ಮಳೆಯಾಗುವುದಿಲ್ಲ. ಚದುರಿದಂತೆ ಮಾತ್ರ ಮಳೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಏ.28 ರಿಂದ 30 ರವರೆಗೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗುವ ಮುನ್ಸೂಚನೆಗಳಿವೆ. ಹೀಗಾಗಿ ಎಲ್ಲರೂ ರಕ್ಷಣಾತ್ಮಕ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದ್ದಾರೆ. ಗುಡುಗು, ಮಿಂಚಿನ ವಾತಾವರಣ ಕಂಡುಬಂದಾಗ ಸುರಕ್ಷಿತವಾದ ಪಕ್ಕಾ ಮನೆಯಲ್ಲಿರುವುದು ಕ್ಷೇಮ. ನೀರಿನ ಮೂಲ, ವಿದ್ಯುತ್ ಎಲೆಕ್ಟ್ರಾನಿಕ್ ಉಪಕರಣಗಳಿಂದ ದೂರ ಇರಬೇಕು. ಕಿಟಕಿ, ಬಾಗಿಲು ಸೇರಿದಂತೆ ಯಾವುದೇ ರೀತಿಯ ಲೋಹಗಳನ್ನು ಸ್ಪರ್ಶಿಸಬಾರದು. ಎತ್ತರವಾದ ಮರಗಳ ಕೆಳಗೆ ನಿಲ್ಲಬಾರದು. ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ ಸಂಪರ್ಕವಿರುವ ಸಾಧನಗಳನ್ನು ಅನ್‌ಪ್ಲಗ್ ಮಾಡಬೇಕು. ಈ ಸಂದರ್ಭದಲ್ಲಿ ಸಿಡಿಲು ಬಡಿಯುವ ಸಾಧ್ಯತೆಯಿ ರುವುದ ರಿಂದ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ಅವರು ಸಲಹೆ ಮಾಡಿದ್ದಾರೆ.

# ಪೋಪ್ ಅಂತ್ಯಕ್ರಿಯೆಗೆ ವ್ಯಾಟಿಕನ್ ಸಿಟಿಗೆ ರಾಷ್ಟ್ರಪತಿ ಮುರ್ಮು, ಕೇಂದ್ರ ಸಚಿವ ರಿಜಿಜು



**ನವದೆಹಲಿ, ಏ.26–** ಪೋಪ್ ಫ್ರಾನ್ಸಿ ಸ್ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ವ್ಯಾಟಿಕನ್ ಸಿಟಿಗೆ ತೆರಳಿದ್ದಾರೆ. ನಿಯೋಗದಲ್ಲಿ ಕೇಂದ್ರ ರಾಜ್ಯ ಸಚಿವ ಜಾರ್ಜ್ ಕುರಿಯನ್ ಮತ್ತು ಗೋವಾದ ಉಪ ಸ್ಪೀಕರ್ ಜೋಶುವಾ ಪೀಟರ್ ಡಿ ಸೋಜಾ ಕೂಡ ಇದ್ದಾರೆ ಎಂದು ರಿಜಿಜು ಹೇಳಿದರು.

ಗೌರವಾನ್ವಿತ ರಾಷ್ಟ್ರಪತಿ ದ್ರೌಪದಿ ಮುರ್ಮು ಜಿ ಅವರೊಂದಿಗೆ ರೋಮ್ (ವ್ಯಾಟಿಕನ್ ಸಿಟಿ)ಗೆ ತೆರಳುತ್ತಿದ್ದೇನೆ. ಪೂಜ್ಯ ಪೋಪ್ ಫ್ರಾನ್ಸಿಸ್ ಅವರ ರಾಜ್ಯ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಮತ್ತು ಸರ್ಕಾರ ಮತ್ತು ಭಾರತದ ಜನರ ಪರವಾಗಿ ಸಂತಾಪ ಸೂಚಿಸಲು. ಗೋವಾದ ರಾಜ್ಯ ಮತ್ತು ಉಪ ಸ್ಪೀಕರ್ ನಿಯೋಗದಲ್ಲಿ ಎಂದು ರಿಜಿಜು ಟ್ವಿಟ್ ಮಾಡಿದ್ದಾರೆ.

ತಮ್ಮ ಎರಡು ದಿನಗಳ ಭೇಟಿಯಲ್ಲಿ, ಅವರು ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲಿದ್ದಾರೆ ಮತ್ತು ಸರ್ಕಾರ ಮತ್ತು ಭಾರತದ ಜನರ ಪರವಾಗಿ ಸಂತಾಪ ಸೂಚಿಸಲಿದ್ದಾರೆ. ಪೋಪ್ ಫ್ರಾನ್ಸಿ ಸ್ ಅವರು ಏಪ್ರಿಲ್ 21 ರಂದು ವ್ಯಾಟಿಕನ್ ನ ಕಾಸಾ ಸಾಂಟಾ ಮಾರ್ಟಾದಲ್ಲಿರುವ ತಮ್ಮ ನಿವಾಸದಲ್ಲಿ ತಮ್ಮ 88 ನೇ ವಯಸ್ಸಿನಲ್ಲಿ ನಿಧನರಾದರು ಎಂದು ವ್ಯಾಟಿಕನ್ ನ ಹೇಳಿಕೆ ತಿಳಿಸಿದೆ.

ಪೋಪ್ ಬೆನೆ ಅವರಿಂದ ಅಧಿಕಾರ ವಹಿಸಿಕೊಂಡ ನಂತರ ರೋಮನ್ ಕ್ಯಾಥೊಲಿಕ್ ಚರ್ಚ್ ಅನ್ನು ಮುನ್ನಡೆಸಿದ ಮೊದಲ ಲ್ಯಾಟಿನ್ ಅಮೇರಿಕನ್ ಪೋಪ್ ಆಗಿದ್ದರು. ।ಮಾರ್ಚ್ 13, 2013 ರಂದು. ಏಪ್ರಿಲ್ 25 ರಂದುಮುರ್ಮು ಅವರು ವ್ಯಾಟಿಕನ್ ಸಿಟಿಯ ಬೆಸಿಲಿಕಾ ಆಫ್ ಸೇಂಟ್ ಪೀಟರ್ ನಲ್ಲಿ ಪುಷ್ಪಗುಚ್ಛ ಇರಿಸುವ ಮೂಲಕ ಪೋಪ್ ಫ್ರಾನ್ಸಿ ಸ್ ಅವರಿಗೆ ಗೌರವ ಸಲ್ಲಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ (ಎಂಇಎ) ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ನಾಳೆ ವ್ಯಾಟಿಕನ್ ಸಿಟಿಯ ಸೇಂಟ್ ಪೀಟರ್ಸ್ ವೃತ್ತದಲ್ಲಿ ನಡೆಯಲಿರುವ ಪೋಪ್ ಫ್ರಾನ್ಸಿ ಸ್ ಅವರ ಅಂತ್ಯಕ್ರಿಯೆಯಲ್ಲಿ ಅವರು ಭಾಗವಹಿಸಲಿದ್ದಾರೆ. ಅಲ್ಲಿ ವಿಶ್ವದಾದ್ಯಂತದ ಗಣ್ಯರು ಸಹ ಉಪಸ್ಥಿತರಿರಲಿದ್ದಾರೆ. ಪೋಪ್ ಫ್ರಾನ್ಸಿ ಸ್ ಅವರನ್ನು ವಿಶ್ವದಾದ್ಯಂತ ಲಕ್ಷಾಂತರ ಜನರು ಸಹಾನುಭೂತಿ, ನಮ್ರತೆ ಮತ್ತು ಆಧ್ಯಾತ್ಮಿಕ ಧೈರ್ಯದ ದೀಪವಾಗಿ ನೆನಪಿಸಿಕೊಳ್ಳುತ್ತಾರೆ ಎಂದು ಎಂಇಎ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಪೋಪ್ ಫ್ರಾನ್ಸಿ ಸ್ ಅವರ ಅಂತ್ಯಕ್ರಿಯೆಯ ಗೌರವಾರ್ಥ ನಾಳೆ ಶೋಕಾಚರಣೆಯನ್ನು ಆಚರಿಸಲಾಗುವುದು ಎಂದು ಭಾರತ ಘೋಷಿಸಿದೆ.ಕೇಂದ್ರ ಗೃಹ ಸಚಿವಾಲಯವು ಹೇಳಿಕೆಯ ಮೂಲಕ ಘೋಷಣೆಯನ್ನು ಮಾಡಿತು ಮತ್ತು ರಾಷ್ಟ್ರಧ್ವಜವನ್ನು ನಿಯಮಿತವಾಗಿ ಹಾರಿಸುವ ಎಲ್ಲಾ ಕಟ್ಟಡಗಳಲ್ಲಿ ಭಾರತದಾದ್ಯಂತ ಅರ್ಧಮಟ್ಟದಲ್ಲಿ ಹಾರಿಸಲು ತೀರ್ಮಾನಿಸಲಾಗಿದೆ.

# ಕೃಷಿ, ಸ್ಮಾರ್ಟ್ ಸಿಟಿ ಕ್ಷೇತ್ರಗಳಿಗೆ ಡಿಜಿಟಲ್ ಟಚ್ : ಸಚಿವ ಜಿತಿನ್



**ವಿಶ್ವಸಂಸ್ಥೆ, ಏ. 26:** ಭಾರತವು ತನ್ನ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಪರಿಸರ ವ್ಯವಸ್ಥೆಯನ್ನು ಕೃಷಿ ಮತ್ತು ಸ್ಮಾರ್ಟ್ ಸಿಟಿಗಳಂತಹ ಕ್ಷೇತ್ರಗಳಿಗೆ ವಿಸ್ತರಿಸುತ್ತಿದೆ ಮತ್ತು ಅಂತರರಾಷ್ಟ್ರೀಯ ಸಮುದಾಯದೊಂದಿಗೆ ಯಶಸ್ಸ ನ್ನು ಹಂಚಿಕೊಳ್ಳಲು ಸಿದ್ಧವಾಗಿದೆ ಎಂದು ಹೇಳಿದೆ.

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ರಾಜ್ಯ ಸಚಿವ ಜಿತಿನ್ ಪ್ರಸಾದ ಅವರು, ಭಾರತೀಯ ಡಿಪಿಐ ಯಶೋಗಾಥೆ ಜಗತ್ತಿಗೆ ಪ್ರದರ್ಶನವಾಗಿದೆ ಎಂದು ಹೇಳಿದರು. ಡಿಪಿಐ ಎಂದರೆ ನಾಗರಿಕರ ಸಬಲೀಕರಣ, ಉತ್ತಮ ಆಡಳಿತ, ಸಾಮಾಜಿಕ ಮಟ್ಟದಲ್ಲಿ ಅಂತರ್ಗತ ಮತ್ತು ಸುಸ್ಥಿರ ಬೆಳವಣಿಗೆ. ಭವಿಷ್ಯವನ್ನು ಕೇವಲ ಯಂತ್ರಗಳಿಂದ ನಿರ್ಮಿಸಲಾಗುವುದಿಲ್ಲ, ಆದರೆ ತಂತ್ರಜ್ಞಾನವು ಮಾನವೀಯತೆಗೆ ಹೇಗೆ ಸೇವೆ ಸಲ್ಲಿಸುತ್ತದೆ ಎಂಬುದರ ಬಗ್ಗೆ ನಾವು ಮಾಡುವ ಆಯ್ಕೆಗಳಿಂದ ನಿರ್ಮಿಸಲಾಗುತ್ತದೆ ಎಂದು ಪ್ರಸಾದ್ ಗುರುವಾರ ವಿಶ್ವ ಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣದಲ್ಲಿ ಹೇಳಿದರು.

ಭಾರತವು ತನ್ನ ಡಿಪಿಐ ಪರಿಸರ ವ್ಯವಸ್ಥೆಯನ್ನು ಕೃಷಿ, ಲಾಜಿಸ್ಟಿಕ್ಸ್, ಸ್ಮಾರ್ಟ್ ಸಿಟಿಗಳು ಮತ್ತು ಹೆಚ್ಚಿನವುಗಳಿಗೆ ವಿಸ್ತರಿಸುತ್ತಿದೆ ಎಂದು ಪ್ರಸಾದ ಹೇಳಿದರು.ಮುಂದಿನ ಅಲೆಯು ಗೌಪ್ಯತೆ ಮತ್ತು ಡೇಟಾ ರಕ್ಷಣೆ, ಡಿಜಿಟಲ್ ಕೌಶಲ್ಯ ಮತ್ತು ಸಾಕ್ಷರತೆ, ಗಡಿಯಾಚೆಗಿನ ಡಿಪಿಐ ಪಾಲುದಾರಿಕೆ, ಸುಸ್ಥಿರತೆ ಮತ್ತು ಸ್ಥಿತಿಸ್ಥಾಪಕತ್ವಕ್ಕೆ ಆದ್ಯತೆ ನೀಡುತ್ತದೆ. ಕೃತಕ ಬುದ್ಧಿಮತ್ತೆಯು ಡಿಪಿಐಗೆ ಬಲವನ್ನು ದ್ವಿಗುಣಗೊಳಿಸಲಿದೆ. ಪಿರಮಿಡ್ ನ ಕೆಳಭಾಗದಲ್ಲಿರುವ ಕಟ್ಟಕಡೆಯ ವ್ಯಕ್ತಿಗೆ ಸೇವೆ ಸಲ್ಲಿಸುವ ನಮ್ಮ ತತ್ವವನ್ನು ಗಮನದಲ್ಲಿಟ್ಟುಕೊಂಡು ಭಾರತವು ಎಐ ಅನ್ನು ನಿಯೋಜಿಸುತ್ತಿದೆ ಎಂದು ಅವರು ಹೇಳಿದರು. ತಂತ್ರಜ್ಞಾನವನ್ನು ಪ್ರಜಾಪ್ರಭುತ್ವಗೊಳಿಸಬೇಕು, ಅಂತರ್ಗತಗೊಳಿಸಬೇಕು, ಕೈಗೆಟುಕುವಂತೆ ಮಾಡಬೇಕು ಮತ್ತು ಮಾನವ ಘನತೆಯನ್ನು ಹೆಚ್ಚಿಸಬೇಕು ಎಂದು ಭಾರತ ನಂಬುತ್ತದೆ ಎಂದು ಪ್ರಸಾದ ಹೇಳಿದರು.

# ಪಾಕ್‌ನ ನದೀಮ್ ಆಹ್ವಾನಿಸಿ ನೆಟ್ಟಿಗರ ಕೆಂಗಣ್ಣಿಗೆ ಗುರಿಯಾದ ನೀರಜ್ ಚೋಪ್ರಾ



**ನವದೆಹಲಿ,ಏ. 26:** ಮುಂದಿನ ತಿಂಗಳು ಬೆಂಗಳೂರಿನಲ್ಲಿ ನಡೆಯಲಿರುವ ಎನ್ಸಿ ಕ್ಲಾಸಿಕ್ ಪಂದ್ಯಕ್ಕೆ ಪಾಕಿಸ್ತಾನದ ಅರ್ಷದ್ ನದೀಮ್ ಅವರನ್ನು ಆಹ್ವಾನಿಸಿದ್ದಕ್ಕಾಗಿ ತನ್ನ ಮೇಲೆ ದ್ವೇಷ ಮತ್ತು ನಿಂದನೆ ಆರೋಪ ಹೊರಿಸಲಾಗಿದೆ ಎಂದು ಭಾರತದ ಜಾವೆಲಿನ್ ಥ್ರೋ ತಾರೆ ನೀರಜ್ ಚೋಪ್ರಾ ಹೇಳಿಕೊಂಡಿದ್ದಾರೆ.

ಟೋಕಿಯೊ ಒಲಿಂಪಿಕ್ ಚಿನ್ನದ ಪದಕ ವಿಜೇತ ಮತ್ತು ಪ್ಯಾರಿಸ್ ಕ್ರೀಡಾಕೂಟದ ಬೆಳ್ಳಿ ವಿಜೇತ ಹರಿಯಾಣದ ತಾರೆ, ನಿಂದನಾತ್ಮಕ ಸಾಮಾಜಿಕ ಮಾಧ್ಯಮ ಪೋಸ್ಟ್ ಗಳಲ್ಲಿ ತನ್ನ ಮತ್ತು ತನ್ನ ಕುಟುಂಬದ ಸಮಗ್ರತೆಯನ್ನು ಪ್ರಶ್ನಿಸುತ್ತಿರುವುದನ್ನು ನೋಡಿ ತೀವ್ರ ನೋವಾಗಿದೆ ಎಂದು ಹೇಳಿದರು. ಕಳೆದ ವರ್ಷ ಪ್ಯಾರಿಸ್‌ನಲ್ಲಿ ಭಾರತೀಯರನ್ನು ಸೋಲಿಸಿ ಚಿನ್ನ ಗೆದ್ದ ನದೀಮ್ ಅವರನ್ನು ಮೇ 24 ರಂದು ಬೆಂಗಳೂ ರಿನಲ್ಲಿ ನಡೆಯಲಿರುವ ಉದ್ಘಾ ಟನಾ ಪಂದ್ಯಕ್ಕೆ ನದೀಮ್ ಅವರನ್ನು ಚೋಪ್ರಾ ಆಹ್ವಾನಿಸಿ ದ್ದರು. ಕಳೆದ 48 ಗಂಟೆಗಳಲ್ಲಿ ನಡೆದ ಎಲ್ಲಾ ಘಟನೆಗಳ ನಂತರ, ಎನ್ಸಿ ಕ್ಲಾಸಿಕ್‌ನಲ್ಲಿ ಅರ್ಷದ್ ಅವರ ಉಪಸ್ಥಿತಿ ಯು ಸಂಪೂರ್ಣವಾಗಿ ಪ್ರಶ್ನಾ ತೀತವಾಗಿದೆ. ನನ್ನ ದೇಶ ಮತ್ತು ಅದರ ಹಿತಾಸಕ್ತಿಗಳು ಯಾವಾ ಗಲೂ ಮೊದಲ ಸ್ಥಾನದಲ್ಲಿರು ತ್ತವೆ ಎಂದು ಭಾರತೀಯ ಸೇನೆಯಲ್ಲಿ ಸುಬೇದಾರ್ ಮೇಜರ್ ಆಗಿರುವ ಚೋಪ್ರಾ ಎಕ್ಸ್‌ನ ಸುದೀರ್ಘ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಇತರ ಬದ್ಧತೆಗಳನ್ನು ಉಲ್ಲೇಖಿಸಿ ನದೀಮ್ ಬರಲು ನಿರಾಕರಿಸಿದ್ದರು. ಪಹಲ್ಗಾಮ್ ದಾಳಿಯಲ್ಲಿ 26 ಜನರನ್ನು ಹೆಚ್ಚಾಗಿ ಪ್ರವಾಸಿಗರನ್ನು ಭಯೋತ್ಪಾದಕರು ಗುಂಡಿಕ್ಕಿ ಕೊಂದ ನಂತರ ನದೀಮ್ ಅವರನ್ನು ಆಹ್ವಾನಿಸಿದ ಬಗ್ಗೆ ತನಗೆ ಚೆನ್ನಾಗಿ ತಿಳಿದಿದೆ ಎಂದು 27 ವರ್ಷದ ಚೋಪ್ರಾ ಹೇಳಿದರು.

# ಅಕ್ಕಿ ಗಿರಣಿಯೊಂದರಲ್ಲಿ ಡ್ರೈಯರ್ ಹೊಗೆ ಸೇವಿಸಿ ಐವರ ದುರ್ಮರಣ

**ಬಹೇಚ್. ಏ. 26:** ಇಲ್ಲಿನ ಅಕ್ಕಿ ಗಿರಣಿಯೊಂದರಲ್ಲಿ ಡ್ರೈಯರ್ ನಿಂದ ಹೊರಸೂಸುವ ಹೊಗೆಯನ್ನು ಉಸಿರಾಡಿ ಐವರು ಕಾರ್ಮಿಕರು ಮೃತಪಟ್ಟಿರುವ ಘಟನ ನಡೆದಿದೆ. ಹೊಗೆಯನ್ನು ಉಸಿರಾಡಿದ ನಂತರ ಮೂರ್ಛೆ ಹೋದ ಇತರ ಮೂವರು ಕಾರ್ಮಿಕರನ್ನು ಜಿಲ್ಲಾ ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಮಾನಂದ ಪ್ರಸಾದ್ ಕುಶ್ವಾಹ ಪಿಟಿಐಗೆ ತಿಳಿಸಿದ್ದಾರೆ.




ರಾಜ್‌ಗರ್ಹಿಯಾ ರೈಸ್ ಮಿಲ್‌ನಲ್ಲಿ ಈ ಘಟನೆ ನಡೆದಿದ್ದು, ಪ್ರಾಥಮಿಕ ತನಿಖೆಯ ಪ್ರಕಾರ ಹಲವಾರು ಕಾರ್ಮಿಕರು ಇಂದು ಬೆಳಿಗ್ಗೆ ಗಿರಣಿಗೆ ಬಂದು ಡ್ರೈಯರ್‌ನಿಂದ ಹೊರಹೊಮ್ಮುವ ಹೊಗೆಯನ್ನು ಪರಿಶೀಲಿಸಲು ಹೋದರು ಎಂದು ಅಧಿಕಾರಿ ತಿಳಿಸಿದ್ದಾರೆ. ಹೊಗೆಯು ತುಂಬಾ ಹೆಚ್ಚಾಗಿತ್ತು, ಅಲ್ಲಿದ್ದ ಎಲ್ಲಾ ಕಾರ್ಮಿಕರು ಘಟನಾ ಸ್ಥಳದಲ್ಲಿ ಮೂರ್ಛೆ ಹೋದರು.

ಮಾಹಿತಿ ಪಡೆದ ನಂತರ, ಅಗ್ನಿಶಾಮಕ ಸೇವಾ ತಂಡವು ಸ್ಥಳಕ್ಕೆ ತಲುಪಿ ಪೀಡಿತ ವ್ಯಕ್ತಿಗಳನ್ನು ಸ್ಥಳಾಂತರಿಸಿತು. ಅವರನ್ನು ಜಿಲ್ಲಾ ಆಸ್ಪತ್ರೆಗೆ ಸಾಗಿಸಲಾಯಿತು. ಆಗಮಿಸಿದಾಗ ಐವರು ಕಾರ್ಮಿಕರು ಮೃತಪಟ್ಟಿದ್ದಾರೆ ಎಂದು ಘೋಷಿಸಲಾಯಿತು.

ಗಾಯಗೊಂಡ ಉಳಿದ ಮೂವರು ಕಾರ್ಮಿಕರು ಪ್ರಸ್ತುತ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅವರು ಹೇಳಿದರು.ಘಟನೆಗೆ ಕಾರಣವಾದ ಸಂದರ್ಭಗಳ ಬಗ್ಗೆ ಪೊಲೀಸರು ಹೆಚ್ಚಿನ ತನಿಖೆಯನ್ನು ಪ್ರಾರಂಭಿಸಿದ್ದಾರೆ.

# ವೀರ ಸಾವರ್ಕರ್ ಬಗ್ಗೆ ಹಗುರವಾಗಿ ಮಾತನಾಡಿದ್ದ ರಾಹುಲ್ ಗಾಂಧಿಗೆ ಸುಪ್ರೀಂ ಛೀಮಾರಿ



**ನವದೆಹಲಿ,ಏ.26–** ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಅವರ ಬಗ್ಗೆ ಅಪೇಕ್ಷಾರ್ಹ ಪದ ಬಳಸಿದ್ದ ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿಗೆ ಸುಪ್ರೀಂಕೋರ್ಟ್ ಛೀಮಾರಿ ಹಾಕಿದೆ.

ಯಾವುದೇ ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಲಘುವಾಗಿ ಮಾತನಾಡುವುದು ಇಲ್ಲವೇ ಆಕ್ಷೇಪಾರ್ಹ ಪದ ಬಳಕೆ ಮಾಡುವುದನ್ನು ನ್ಯಾಯಾಲಯ ಒಪ್ಪುವುದಿಲ್ಲ, ಇಂಥ ಹೇಳಿಕೆಗಳನ್ನು ನ್ಯಾಯಾಲಯ ಅನುಮತಿಸುವುದಿಲ್ಲ. ನಿಮ್ಮ ತಪ್ಪುಗಳನ್ನು ತಿದ್ದಿಕೊಳ್ಳಬೇಕು. ಒಂದು ವೇಳೆ ಇದು ಪುನರಾವರ್ತನೆಯಾದರೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸಬೇಕಾಗುತ್ತದೆ ಎಂದು ಎಚ್ಚರಿಕೆ ಕೊಟ್ಟಿದೆ. ಮಹಾರಾಷ್ಟ್ರದ ಆಕೋಲ ಜಿಲ್ಲೆಯಲ್ಲಿ ಭಾರತ್ ಜೋಡೊ ಕಾರ್ಯಕ್ರಮದ ವೇಳೆ ರಾಹುಲ್ ಗಾಂಧಿ ಅವರು ವೀರ ಸಾವರ್ಕರ್ ಕುರಿತು ಬ್ರಿಟಿಷ್ ಸರ್ಕಾರದಿಂದ ಪಿಂಚಣಿ ಪಡೆದ ಆಂಗ್ಲರ ಸೇವಕ ಎಂದು ಟೀಕೆ ಮಾಡಿದ್ದರು. ಹೀಗಾಗಿ ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲಾಗಿತ್ತು.

ವಿಚಾರಣೆ ನಡೆಸಿದ್ದ ಅಲಹಾಬಾದ್ ಹೈಕೋರ್ಟ್ ಸಮನ್ಸ್ ರದ್ದುಗೊಳಿಸಲು ನಿರಾಕರಿಸಿತ್ತು. ಇದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ಕೈಗೆತ್ತಿಕೊಂಡ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಮನಮೋಹನ್ ಅವರಿದ್ದ ವಿಭಾಗೀಯ ಪೀಠ ರಾಹುಲ್ ಗಾಂಧಿ ಹೇಳಿಕೆಗೆ ಛೀಮಾರಿ ಹಾಕಿತು. ವಸಾಹತುಶಾಹಿ ಸರ್ಕಾರದಿಂದ ಪಿಂಚಣಿ ಪಡೆದ ಬ್ರಿಟಿಷ್ ಸೇವಕ ಎಂದು ಹೇಳಿದ್ದೀರಿ. ಸ್ವಾತಂತ್ರ್ಯ ಹೋರಾಟಗಾರರನ್ನು ಹೀಗೆ ಅವಮಾನಿಸುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನಿಸಿತು. ನೀವು ಸಂಸದರು ಮೇಲಾಗಿ ಲೋಕಸಭೆಯ ಪ್ರತಿಪಕ್ಷದ ನಾಯಕರು. ರಾಜಕೀಯ ನಾಯಕರಾಗಿ ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಈ ರೀತಿ ವಿವಾದಾತ್ಮಕ ಪದಗಳನ್ನು ಏಕೆ ಬಳಸುತ್ತೀರಿ. ಪ್ರಚೋದಿಸುವ ಉದ್ದೇಶ ಇಲ್ಲದಿದ್ದರೆ ಅಂಥ ಹೇಳಿಕೆಗಳನ್ನು ಏಕೆ ನೀಡುತ್ತಿದ್ದೀರಿ ಎಂದು ನ್ಯಾಯಮೂರ್ತಿಗಳು ಪ್ರಶ್ನೆಗಳ ಸುರಿಮಳೆಗೈದರು.

ಮಹಾತ್ಮ ಗಾಂಧಿ ಅವರೇ ವೀರಸಾವರ್ಕರ್ ಅವರನ್ನು ನಿಷ್ಠಾವಂತ ಸೇವಕ ಎಂದು ಬಳಸಿರುವುದು ನಿಮ್ಮ ಕಕ್ಷಿದಾರರಿಗೆ ಗೊತ್ತಿದೆಯೇ ನಿಮ್ಮ ಅಜ್ಜಿ ಕೂಡ ಇವರಿಗೆ ಪತ್ರವನ್ನು ಬರೆದಿದ್ದಾರೆ ಎಂಬುದನ್ನು ಮರೆತುಬಿಟ್ಟಿದ್ದೀರಿ ಮುಂದೆ ಇಂಥ ಹೇಳಿಕೆಗಳನ್ನು ಕೊಡಬೇಡಿ ಎಂದು ನಿಮ್ಮ ಕಕ್ಷಿದಾರರಿಗೆ ಹೇಳಬೇಕು ಎಂದು ರಾಹುಲ್ ಪರ ವಕೀಲರಿಗೆ ನ್ಯಾಯಾಲಯ ಸೂಚಿಸಿತು. ಸದ್ಯ ವಿಚಾರಣೆಗೆ ತಡೆಯಾಜ್ಞೆ ನೀಡಲು ಸುಪ್ರೀಂಕೋರ್ಟ್ ಒಪ್ಪಿಗೆ ಸೂಚಿಸಿದೆ. ನೀವು ಪದೇ ಪದೇ ಇದೇ ರೀತಿ ಹೇಳಿಕೆಗಳನ್ನು ಕೊಡುವುದಾದರೆ ಸ್ವಯಂಪ್ರೇರಿತ ದೂರು ದಾಖಲು ಮಾಡುತ್ತೇವೆ. ನಮ್ಮ ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಟೀಕೆ ಮಾಡಲು ನಾವು ಯಾರಿಗೂ ಅವಕಾಶ ಕೊಡುವುದಿಲ್ಲ. ಎಚ್ಚರ ಇಟ್ಟುಕೊಂಡು ಮಾತನಾಡಿ ಎಂದು ರಾಹುಲ್ ಗಾಂಧಿ ಅವರಿಗೆ ಸೂಚಿಸಿದೆ. ಇತಿಹಾಸ ಗೊತ್ತಿಲ್ಲದವರು ತಿಳಿದುಕೊಂಡು ಮಾತನಾಡಬೇಕು. ನಮಗೆ ವಾಕ್ ಸ್ವಾತಂತ್ರ್ಯವಿದೆ ಎಂದು ಬಾಯಿಗೆ ಬಂದಂತೆ ಮಾತನಾಡಬಾರದು, ಜವಾಬ್ದಾರಿಯುತ ಸ್ಥಾನದಲ್ಲಿರುವ ನೀವು ಜವಾಬ್ದಾರಿ ಅರಿತು ಮಾತನಾಡಿದರೆ ನಿಮ್ಮ ಸ್ಥಾನಕ್ಕೂ ಗೌರವ ಇರುತ್ತದೆ ಎಂದು ನ್ಯಾಯಾಲಯ ಛಾಟಿ ಬೀಸಿತು.

ನೀವು ಒಂದು ಬಾರಿ ವೀರ ಸಾವರ್ಕರ್ ಬ್ರಿಟಿಷರ ಪಿಂಚಣಿ ಸೇವಕ ಎಂದು ಹೇಳುತ್ತೀರಿ. ಮುಂದಿನ ಬಾರಿ ಮಹಾತ್ಮಾ ಗಾಂಧಿಯನ್ನು ಬ್ರಿಟಿಷರ ಸೇವಕ ಎಂದು ಹೇಳಿದರೆ ನಾವು ಒಪ್ಪಬೇಕೇ ಒಬ್ಬರ ಬಗ್ಗೆ ಮಾತನಾಡುವಾಗ ನಾಲಿಗೆ ಹಿಡಿತ ಇಟ್ಟುಕೊಂಡು ಮಾತನಾಡಿ, ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಗೊತ್ತಿಲ್ಲ ಎಂದರೆ ಸುಮ್ಮನಿದ್ದು ಬಿಡಿ. ಸುಖಾಸುಮ್ಮನೆ ವಿವಾದವನ್ನು ಮೈಮೇಲೆ ಎಳೆದುಕೊಳ್ಳಬೇಡಿ.

ಇತಿಹಾಸ ಮತ್ತು ಭೂಗೋಳವನ್ನು ತಿಳಿಯದೆ ಮಾತನಾಡಿದರೆ ಅದು ಅಭಾಸವಾಗುತ್ತದೆ. ರಾಜಕೀಯಕ್ಕಾಗಿ ನೀವು ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಈ ರೀತಿ ಮಾತನಾಡುತ್ತಿದ್ದೀರಿ ಎಂದರೆ ನ್ಯಾಯಾಲಯ ಸುಮ್ಮನಿರಬೇಕೆ? ಎಂದು ನ್ಯಾಯಾಲಯ ಪ್ರಶ್ನೆ ಮಾಡಿದೆ. ನಿಮ್ಮ ಕಕ್ಷಿದಾರರ ಹೇಳಿಕೆ ಅತ್ಯಂತ ಬೇಜಾವಾಬ್ದಾರಿಯಿಂದ ಕೂಡಿದೆ. ವೀರ್ ಸಾವರ್ಕರ್ ಅವರನ್ನು ಹೊಗಳಿ ಅವರ ಅಜ್ಜಿಯೇ ಪ್ರಶಂಸನಾ ಪತ್ರ ಬರೆದಿದ್ದಾರೆ. ಅವರ ದೃಷ್ಟಿಯಲ್ಲಿ ಒಳ್ಳೆಯವರಾದ ಸಾರ್ವಕರ್ ಇವರಿಗೆ ಹೇಗೆ ಬ್ರಿಟಿಷ್ ಸೇವಕರಾಗಿದ್ದರು? ಮಹಾರಾಷ್ಟ್ರದಲ್ಲಿ ಈಗಲೂ ಅವರನ್ನು ಪೂಜಿಸುತ್ತಾರೆ. ಇದು ಅವರವರ ನಂಬಿಕೆ. ಮುಂದೆ ಈ ರೀತಿ ಹೇಳಿಕೆಗಳನ್ನು ಕೊಡಬೇಡಿ ಎಂದು ರಾಹುಲ್ ಗಾಂಧಿ ಪರ ವಕೀಲರಾದ ಅಭಿಷೇಕ್ ಮನುಸಿಂಗ್ವಿಗೆ ನ್ಯಾಯಾಧೀಶರು ಸೂಚನೆ ಕೊಟ್ಟರು.

# ಇಸ್ರೋ ಮಾಜಿ ಮುಖ್ಯಸ್ಥ ಕೆ.ಕಸ್ತೂರಿರಂಗನ್ ಇನ್ನಿಲ್ಲ..!



**ಬೆಂಗಳೂರು, ಏ.26–** ಪದ್ಮಶ್ರೀ ಸರಣಿಯ ಪ್ರಶಸ್ತಿಗಳ ಪುರಸ್ಕೃತ ಹಾಗೂ ಖ್ಯಾತ ವಿಜ್ಞಾನಿ ಕೆ.ಕಸ್ತೂರಿರಂಗನ್ ಅವರು ಇಂದು ವಿಧಿವಶರಾಗಿದ್ದಾರೆ. ನಗರದಲ್ಲಿರುವ ಅವರ ನಿವಾಸದಲ್ಲಿ ಬೆಳಿಗ್ಗೆ ಕಸ್ತೂರಿರಂಗನ್ (84) ಅವರು ಕೊನೆಯಿಸಿರೆಳೆದಿದ್ದಾರೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಬಾಹ್ಯಾಕಾಶ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡಿದ ಕೆ.ಕಸ್ತೂರಿರಂಗನ್ ಅವರು ಇಸ್ರೋ ಅಧ್ಯಕ್ಷರಾಗಿ 1994ರಿಂದ 2003ರವರೆಗೆ ಸೇವೆ ಸಲ್ಲಿಸಿದ್ದರು. ಈ ಅವಧಿಯಲ್ಲಿ ಜಿಎಸ್‌ಎಲ್‌ವಿಯು ಹಲವಾರು ಉಪಕರಣಗಳನ್ನು ಅಭಿವೃದ್ಧಿಪಡಿಸಿ ಯಶಸ್ವಿಯಾಗಿ ಉಡಾವಣೆ ಮಾಡುವಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಭಾರತೀಯ ಬಾಹ್ಯಾಕಾಶ ಯೋಜನೆಯಲ್ಲಿ ಕಸ್ತೂರಿರಂಗನ್ ಅವರ ಪಾತ್ರ ಗಣ್ಯವಾಗಿದ್ದು, ಉಪಗ್ರಹ ತಂತ್ರಜ್ಞಾನ ಮತ್ತು ಬಾಹ್ಯಾಕಾಶ ಅನ್ವೇಷಣೆಯಲ್ಲಿ ಹೆಚ್ಚಿನ ತಜ್ಞತೆ ಪಡೆದಿದ್ದರು. ತಮ್ಮ ಜೀವಮಾನದ ಸಾಧನೆಗಾಗಿ ಭಾರತದ ಅತ್ಯುನ್ನತ ಗೌರವಗಳಾದ ಪದ್ಮಶ್ರೀ, ಪದ್ಮಭೂಷಣ ಹಾಗೂ ಪದ್ಮವಿಭೂಷಣ ಸೇರಿದಂತೆ ಸರಣಿ ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿದ್ದರು.

ಇಸ್ರೋದಿಂದ ನಿವೃತ್ತರಾದ ಬಳಿಕ ವೈಜ್ಞಾನಿಕ ಮತ್ತು ಶೈಕ್ಷಣಿಕ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು. ಜೊತೆಗೆ ಸರ್ಕಾರದ ಹಲವಾರು ಸಮಿತಿಗಳಲ್ಲಿ ಕೆಲಸ ಮಾಡಿ ನಾಗರಿಕರ ಸೌಲಭ್ಯ ಸುಧಾರಣೆ ಸೇರಿದಂತೆ ಹಲವು ಸ್ಮರಣೀಯ ಕೆಲಸಗಳನ್ನು ಮಾಡಿದ್ದರು.

# ಇಒ ಖಾಲಿದ್ ಅಹ್ಮದ್ ರಿಂದ ನರೇಗಾ ಯೋಜನೆ ಕಾಮಗಾರಿ ಪರಿಶೀಲನೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಏ.26–** ತಾಲೂಕಿನ ಸಾದಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಿಂಭಾಗದ ಕೆರೆಯಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ನಡೆಯುತ್ತಿರುವ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಕಾಮಗಾರಿಗಳನ್ನು ತಾಲೂಕು ಪಂಚಾಯಿತಿ ಇಒ ಖಾಲಿದ್ ಅಹಮ್ಮದ್ ಅವರು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಏಪ್ರಿಲ್ ತಿಂಗಳಿನಿಂದ ನರೇಗಾ ಯೋಜನೆಯ ಕೂಲಿಯನ್ನು ಸರ್ಕಾರವು 370ಕ್ಕೆ ಹೆಚ್ಚಿಸಿದೆ. ಕೂಲಿ ಕಾರ್ಮಿಕರು ತಮಗೆ ನೀಡಲಾದ ಕೆಲಸವನ್ನು ನಿಗದಿತ ಅಳತೆಯ ಪ್ರಕಾರ ನಿರ್ವಹಿಸಿದರೆ, ಅವರ ಖಾತೆಗಳಿಗೆ ಕೂಲಿ ಹಣವನ್ನು ಜಮಾ ಮಾಡಲಾಗುವುದು" ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಕೂಲಿ ಕಾರ್ಮಿಕರ ಹಾಜರಾತಿಯನ್ನು ಪ್ರತಿದಿನ ಓಒಖ ನಲ್ಲಿ ಕಡ್ಡಾಯವಾಗಿ ದಾಖಲಿಸಬೇಕು. ಬೇಸಿಗೆಯನ್ನು ಗಮನದಲ್ಲಿಟ್ಟು ಕೊಂಡು ಕಾರ್ಮಿಕರಿಗೆ ಟೆಂಟ್ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದು ಗ್ರಾಪಂ ಅಭಿವೃದ್ಧಿ ಅಧಿಕಾರಿ ಪ್ರಭುಕುಮಾರ್ ಅವರಿಗೆ ಖಾಲಿದ್ ಅಹಮ್ಮದ್ ಸೂಚಿಸಿದರು.

ಗ್ರಾಪಂ ಅಭಿವೃದ್ಧಿ ಅಧಿಕಾರಿ ಪ್ರಭುಕುಮಾರ್ ಅವರು ಅಗತ್ಯ ಮಾಹಿತಿಯನ್ನು ನೀಡಿದರು. ಈ ಸಂದರ್ಭದಲ್ಲಿ ತಾಂತ್ರಿಕ ಸಂಯೋಜಕ ವಿನೋದ್, ತಾ.ಐ.ಇ.ಸಿ. ಸಂಯೋಜಕರಾದ ಈರೇಶ್, ಕಾರ್ಯದರ್ಶಿ ವಿರೂಪಾಕ್ಷಿ, ತಾಂತ್ರಿಕ ಸಹಾಯಕರಾದ ಮಹಮ್ಮದ್ ರಫಿ, ಬಸವನಗೌಡ, ಜಿ.ಕೆ.ಎಂ. ಪಾರ್ವತಿ ಸೇರಿದಂತೆ ಇತರರು ಉಪಸ್ಥಿತರಿದ್ದರು

## ಶಾಸಕ ಜಿ.ಹಂಪಯ್ಯ ನಾಯಕ್ ಭೇಟಿ

# ಉಟಕನೂರಿನ ಮರಿ ಬಸವಲಿಂಗ ತಾತನ ಜಾತ್ರಾ ಮಹೋತ್ಸವಕ್ಕೆ ಭರದ ಸಿದ್ಧತೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಏ. 26–** ವಿಧಾನಸಭಾ ಕ್ಷೇತ್ರದ ಪೋತ್ನಾಳ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಉಟಕನುರ ಗ್ರಾಮದಲ್ಲಿ ಇದೇ ಮೇ 1ರಂದು ನಡೆಯಲಿರುವ ಮರಿ ಬಸವಲಿಂಗ ತಾತನವರ ಜಾತ್ರಾ ಮಹೋತ್ಸವದ ಪೂರ್ವ ಸಿದ್ಧತಾ ಕಾರ್ಯಕ್ರಮವನ್ನು ಶಾಸಕ ಜಿ. ಹಂಪಯ್ಯ ನಾಯಕ್ ವೀಕ್ಷಿಸಿದರು.



ಕ್ಷೇತ್ರಕ್ಕೆ ಭೇಟಿ ನೀಡಿದ ಶಾಸಕರು, ಜಾತ್ರಾ ಸ್ಥಳದಲ್ಲಿ ಕೈಗೊಳ್ಳಲಾಗುತ್ತಿರುವ ವೇದಿಕೆ ನಿರ್ಮಾಣ ಮತ್ತು ರಸ್ತೆ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಕಾಮಗಾರಿಗಳನ್ನು ತ್ವರಿತವಾಗಿ ಮತ್ತು ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು. ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಸಾರ್ವಜನಿಕರಿಗೆ ಮತ್ತು ಮಠದ ಭಕ್ತಾದಿಗಳಿಗೆ ಯಾವುದೇ ತೊಂದರೆಯಾಗದಂತೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ಯುವ ಮುಖಂಡ ರವಿ ಬೋಸರಾಜು, ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕ ಬಸನಗೌಡ ತುರುವಿಹಾಳ, ಎಪಿಎಂಸಿ ಮಾಜಿ ಅಧ್ಯಕ್ಷ ಎ. ಬಾಲಸ್ವಾಮಿ ಕೊಡ್ಲಿ, ಮುಖಂಡರಾದ ಶ್ರೀಶೈಲ ಗೌಡ, ಶರಣಪ್ಪ ಗೌಡ ಜಾಡಲ್ದಿನ್ನಿ, ಮಲ್ಲಯ್ಯ, ಯುವ ಮುಖಂಡರಾದ ಎಸ್. ಎಂ. ಪಾಟೀಲ್, ಶಿವರಾಜ್ ಗೌಡ, ವೀರನಗೌಡ ಉದ್ಬಾಳ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗ್ರೇಟರ್ ಬೆಂಗಳೂರು ಮಾಡೇ ಮಾಡ್ತಿವಿ : ಡಿ.ಕೆ.ಶಿವಕುಮಾರ್

**ಮೈಸೂರು,ಏ.26–** ಕುಮಾರಸ್ವಾಮಿ ಅವರ ಕಾಲದಲ್ಲೇ 7 ಟೌನ್ ಶಿಪ್ ಮಾಡಲು ತೀರ್ಮಾನ ಆಗಿತ್ತು, ಅದಕ್ಕಾಗಿ 300 ಕೋಟಿ ಹಣ ಕೊಟ್ಟಿದ್ದರು,ಟೌನ್ ಶಿಪ್ ಪ್ಲಾನ್ ಅವರ ಕಾಲದಲ್ಲೇ ಆಗಿದ್ದು.ನಾನು ಡಿನೋಟಿಫಿಕೇಶ್ ಮಾಡಲು ಹೋಗಲ್ಲ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದ್ದಾರೆ.



ಬಿಡದಿ ಟೌನ್ ಶಿಪ್‌ಗೆ ರೈತರ ಭೂಮಿ ಕೈ ಬಿಡುವಂತೆ ಸಿಎಂಗೆ ದೇವೇಗೌಡರ ಪತ್ರಬರೆದ ಕುರಿತು ಮಾಧ್ಯಮದೊಂದಿಗೆ ಮಾತನಾಡಿ ಅವರು ಈ ಹಿಂದೆ ನನ್ನ ಮೇಲೆ ಏನೆಲ್ಲಾ ಹೇಳಿದ್ರು. ಅದೆಲ್ಲ ಇತಿಹಾಸ.ಟೌನ್ ಶಿಪ್ ಪಿತಾಮಹ ದೇವೇಗೌಡ ಹಾಗೂ ಕುಮಾರಸ್ವಾಮಿ,ಯಾರು ಏನೇ ಹೇಳಿದ್ರು ಗ್ರೇಟರ್ ಬೆಂಗಳೂರು ಮಾಡೇ ಮಾಡುತ್ತೇವೆ ಎಂದು ತಿರುಗೇಟು ನೀಡಿದರು. ಬೆಂಗಳೂರಿಗಿಂತ ಚೆನ್ನಾಗಿ 10 ಸಾವಿರ ಎಕರೆಯಲ್ಲಿ ಉತ್ತಮ ಸಿಟಿ ಮಾಡುತ್ತೇವೆ. ಇದು ಮಾಡೆಲ್ ಸಿಟಿ ಆಗುತ್ತೆ. ರೈತರು ಜಮೀನಿನ ಬದಲಾಗಿ ದುಡ್ಡು ತೆಗೆದುಕೊಳ್ಳಬಹುದು.ಇಲ್ಲದಿದ್ರೆ ಅಭಿವೃದ್ಧಿ ಪಡಿಸಿದ ಭೂಮಿ ತೆಗೆದುಕೊಳ್ಳಬಹುದು ಎಂದು ತಿಳಿಸಿದರು.

ಎರಡು ಬಾರಿ ಕುಮಾರಸ್ವಾಮಿ ಸಿಎಂ ಆದ್ರೂ ಯಾಕೆ ರೈತರ ಭೂಮಿ ಸ್ವಾಧೀನದಿಂದ ಕೈ ಬಿಡಲಿಲ್ಲ.ಈ ಬಗ್ಗೆ ದೇವೇಗೌಡರೇ ಹೇಳಲಿ,ಇದರಲ್ಲಿ ರಾಜಕೀಯ ಬೇಡ ಇದೆಲ್ಲ ನಿಮ್ಮ ಮಗನೆ ಮಾಡಿದ್ದು, ನಿಮ್ಮ ಕಾಲದಲ್ಲೇ ಆಗಿದ್ದು ಎಂದು ಡಿಕೆಶಿ ಟಾಂಗ್ ನೀಡಿದರು. ಕಾವೇರಿ ನಮ್ಮ ಜೀವನದಿ, ತಾಯಿಯ ಆರತಿ ಮಾಡ್ಬೆಕು.ಹೀಗಾಗಿ ಕಾವೇರಿ ಆರತಿ ಮಾಡಲು ಮುಂದಾಗಿ ದ್ದೇವೆ.ವ್ಯವಸಾಯ ,ಕುಡಿಯಲು ನೀರು ಎಲ್ಲವನ್ನೂ ತಾಯಿ ಕೊಡುತ್ತಿದ್ದಾಳೆ.ರಾಜ್ಯಕ್ಕೆ ,ಎಲ್ಲರಿಗೂ ಒಳಿತಾಗಲಿ ಎಂದು ಆರತಿ ಮಾಡುತ್ತೇವೆ ಎಂದು ಹೇಳಿದರು.

ಕಾಶ್ಮೀರದಲ್ಲಿ ಉಗ್ರರ ಅಟ್ಟಹಾಸ ವಿಚಾರ ಬಗ್ಗೆ ಪ್ರತಿಕ್ರಿಯೆ ನೀಡಿ ನಾನು ಇಲ್ಲಿ ಯಾರ ಬಗ್ಗೆಯೂ ಬೊಟ್ಟು ಮಾಡಲ್ಲ ,ಯಾರ ವಿರುದ್ಧವೂ ಮಾತನಾಡುವುದಿಲ್ಲ.ಇದು ರಾಜಕೀಯ ಮಾಡುವ ವಿಚಾರ ಅಲ್ಲ.ಯಾರು ಈ ವಿಚಾರದಲ್ಲಿ ಯಾರೂ ಕೂಡಾ ರಾಜಕೀಯ ಮಾಡಬಾರದು.ಪಕ್ಷದ ಅಧ್ಯಕ್ಷ ಹಾಗೂ ಡಿಸಿಎಂ ಆಗಿ ಹೇಳುತ್ತಿದ್ದೇನೆ ಎಂದರು. ಹೊರದೇಶದಿಂದ ಬಂದು ಶಾಂತಿ ಕದಡುವ ಕೆಲಸ ಮಾಡಿದ್ದಾರೆ.ಅವರನ್ನು ಮುಗಿಸುವ ಕೆಲಸ ಆಗಬೇಕು.ಕೇಂದ್ರ ಸರ್ಕಾರ ಹೀಗಾಗಲೇ ಆ ಕೆಲಸ ಮಾಡಿದೆ.ಈ ವಿಚಾರವಾಗಿ ನಮ್ಮ ಸಂಪೂರ್ಣ ಸಹಕಾರ ಇರಲಿದೆ ಎಂದು ಸ್ಪಷ್ಟಪಡಿಸಿದರು.

ರಾಮನಗರ ಹೆಸರು ಬದಲಾವಣೆ ವಿಚಾರದ ಬಗ್ಗೆ ಮಾತನಾಡಿ ,ಅದನ್ನು ಹೇಗೆ ಮಾಡಬೇಕು ಅಂತಾ ನನಗೆ ಗೊತ್ತು.ಮಾಡೇ ಮಾಡುತ್ತೇನೆ ಎಂದು ಸವಾಲು ಹಾಕಿದರು . ನಾವೇನು ಹೊರಗಿನಿಂದ ಬಂದವರಲ್ಲ. ನಮ್ಮ ಭೂಮಿ ನಮ್ಮ ನೆಲದ ಬಗ್ಗೆ ನಮಗೆ ಗೊತ್ತು.ಯಾರು ಅಪ್ಪ –ಅಮ್ಮನ ಹೆಸರು ಬದಲಾಯಿಸಲ್ಲ .ಅಫಿಡೆವಿಟ್ ಮಾಡಿಸಿ ಕೊಳ್ಳಬಹುದು ಅಷ್ಟೆ ಡಿ ಕೆ ಶಿವಕುಮಾರ್ ಬಗ್ಗೆ ಭಯನಾ ಅಸೂಯೆನಾ,ಏನು ಅಂತಾ ಗೊತ್ತಿಲ್ಲ ಆದರೆ ನನ್ನ ಮೇಲೆ ಅತಿಯಾದ ಪ್ರಿತಿ ಮೈಸೂರಿನಲ್ಲಿ ಎಂದರು .

# ಕ್ರಿಕೇಟ್ ಪಂದ್ಯಾವಳಿಗೆ ಚಾಲನೆ



**ಕಲಬುರಗಿ:ಏ.26:** ಸರ್ಕಾರಿ ಮಹಾವಿದ್ಯಾಲಯ(ಸ್ವಾಯತ್ತ) ಕಲಬುರಗಿ 2024–25 ನೇ ಸಾಲಿನ ಡಾ.ಬಿ.ಆರ್.ಅಂಬೇಡ್ಕರ ಸ್ಮರಣಾರ್ಥ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳ ಪ್ರಯುಕ್ತ ಅಂತರ್ ಕಾಲೇಜು ಸಿಬ್ಬಂದಿಗಳ ಕ್ರಿಕೇಟ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭ ಕಾಲೇಜಿನ ಕ್ರೀಡಾಂಗಣದಲ್ಲಿ ನಡೆಯಿತು. ಪಂದ್ಯಾವಳಿಯನ್ನು ಸೇಡಂ ವಲಯ ಸಿಪಿಐ ಮಹಾದೇವಪ್ಪ ದಿಡ್ಡಿಮನಿ ಅವರು ಬ್ಯಾಟ್ ಮಾಡುವ ಮೂಲಕ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಯ ಸಹಾಯಕ ನಿರ್ದೇಶಕರಾದ ರಾಜೇಂದ್ರಕುಮಾರ ಸಿಂದೆ ಅವರು ಆಗಮಿಸಿದರು. ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಡಾ.ಸವಿತಾ ತಿವಾರಿ ಅವರು ವಹಿಸಿದ್ದರು.

ಕಾರ್ಯಕ್ರಮದಲ್ಲಿ ಪಂದ್ಯಾವಳಿಯ ಅಧ್ಯಕ್ಷರಾದ ಡಾ.ಶ್ರೀಮಂತ ಬಿ.ಹೋಳ್ಕರ, ಸಾಂಸ್ಕೃತಿಕ ಸಮಿತಿಯ ಸಂಚಾಲಕರಾದ ಡಾ.ಬಲಭೀಮ ಸಾಂಗ್ಲಿ, ಡೀನರಾದ ಡಾ. ಮಲ್ಲೇಶಪ್ಪಾ ಕುಂಬಾರ, ಡಾ.ರಾಜಕುಮಾರ ಸಲಗರ, ಕ್ರೀಡಾ ವಿಭಾಗದ ನಿರ್ದೇಶಕರಾದ ಡಾ.ಬೆಣ್ಣೂರ ವಿಶ್ವನಾಥ, ಡಾ.ಅಡಿವೇಶ ಟಿ.ವಿ., ಡಾ. ರಾಜಶೇಖರ ಮಡಿವಾಳ, ಡಾ.ರಾಬಿಯಾ ಇಫ್ಪತ್, ಡಾ.ರಾಜೇಶ ಅಜಬಸಿಂಗ್, ಡಾ.ರಮೇಶ, ಡಾ.ಚಂದ್ರಕಾಂತ ಶಿರೋಳ್ಳಿ, ಪೊ?ತೆ, ಡಾ.ಮಲ್ಲಿಕಾರ್ಜುನ ಶೆಟ್ಟಿ ಸೇರಿದಂತೆ ಮುಂತಾದವರು ಇದ್ದರು.

# ನಾವು ಭಾರತೀಯರು,ನಾವೆಲ್ಲರೂ ಒಂದೇ, ಎನ್ನುವ ಮನಸ್ಥಿತಿ ಬೆಳೆಸಿಕೊಳ್ಳಿ: ಕಲ್ಮಠಶ್ರೀ



**ಯುವ ಮಾರ್ಗ ಸುದ್ದಿ**

**ಮಾನ್ವಿ.ಏ.26–** ಪಟ್ಟಣದ ವಾಲ್ಮೀಕಿ ವೃತ್ತದಲ್ಲಿ ಯುವ ಬ್ರಿಗೇಡ್ ವತಿಯಿಂದ ಗುರುವಾರ ಸಂಜೆ ದೇಶದ ಕಾಶ್ಮೀರದಲ್ಲಿನ ಪೆಹಲ್ಗಾಂನಲ್ಲಿ ಉಗ್ರರಿಂದ ಹತ್ಯೆಯಾದವರ ಅತ್ಮಕ್ಕೆ ಶಾಂತಿ ಕೋರಿ ನಡೆಸಿದ ಪಂಜಿನ ಮೆರವಣಿಗೆಗೆ ಶ್ರೀ ವಾಲ್ಮೀಕಿ ಮಹಾರ್ಷಿಗಳ ಮೂರ್ತಿಗೆ ಪುಷ್ಪ ಸಮರ್ಪಿಸಿ ಪಂಜಿನ ಮೆರವಣಿಗೆಗೆ ಚಾಲನೆ ನೀಡಿ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ ನೆರೆ ರಾಷ್ಟ್ರವು ಆರ್ಥಿಕವಾಗಿ ದಿವಾಳಿಯಾಗಿದ್ದರು ಕೂಡ ನಮ್ಮ ದೇಶದಲ್ಲಿ ಉಗ್ರರನ್ನು ಬಿಟ್ಟು ಸಾರ್ವಜನಕರಿಗೆ ತೊಂದರೆಕೊಟ್ಟು ಕೆಣಕುತ್ತಿದೆ ನೀನು ಹಿಂದೂ ಎಂದು ಕೇಳಿ ಹತ್ಯಮಾಡಿರುವುದು ಉಗ್ರರ ಜೀಹಾದಿ ಮನಸ್ಥಿತಿಯನ್ನು ತೋರಿಸುತ್ತಿದೆ ಇಂದು ನಾವು ನಮ್ಮ ಎಲ್ಲಾ ಜಾತಿಗಳನ್ನು ಬಿಟ್ಟು ನಾವೆಲ್ಲರು ಒಂದೆ ನಾವೆಲ್ಲರು ಹಿಂದೂಗಳು ನಾವು ಭಾರತೀಯರು ಎನ್ನುವ ಮನಸ್ಥಿತಿಯನ್ನು ಬೆಳೆಸಿಕೊಂಡು ಇಂತಹ ಜಿಹಾದಿ ಮನಸ್ಥಿತಿ ಹೊಂದಿ ರುವವರ ಮನಪರಿವರ್ತನೆ ಮಾಡುವ ಸಮಯ ಬಂದೆ ಬರುತ್ತದೆ ಕೇಂದ್ರ ಸರ್ಕಾರವು ಉಗ್ರರಿಗೆ ಸರಿಯಾದ ಉತ್ತರವನ್ನು ನೀಡೆ ನೀಡುತ್ತದೆ ಎಂದು ತಿಳಿಸಿದರು.

ಯುವ ಬ್ರಿಗೇಡ್ ಜಿಲ್ಲಾ ಸಂಚಲಾಕರಾದ ಬಸವರಾಜ ಪೋತ್ನಾಳ್ ಮಾತನಾಡಿ, ಕಾಶ್ಮೀರದಲ್ಲಿನ ಪೆಹಲ್ಗಾಂನಲ್ಲಿ ಉಗ್ರರು ಹಿಂದೂಗಳ ಹೆಸರುಗಳನ್ನು ಕೇಳಿ ಹಿಂದೂಗಳನ್ನು ಗುರಿಯಾಗಿಸಿಕೊಂಡು 26 ಜನರನ್ನು ಹತ್ಯಮಾಡಿರುವುದು ಅತ್ಯಂತ ಖಂಡನಯಾವಾಗಿದೆ ಎಂದು ತಿಳಿಸಿದರು.

ಪಟ್ಟಣದ ವಾಲ್ಮೀಕಿ ವೃತ್ತದಿಂದ ಬಸವ ವೃತ್ತದವರೆಗೂ ನೂರಾರು ಜನರು ಮೇಣದ ಬತ್ತಿಯನ್ನು ಹಿಡಿದು ಪಂಜೀನ ಮೆರವಣಿಗೆ ನಡೆಸಿ ಕಾಶ್ಮೀರದಲ್ಲಿನ ಪೆಹಲ್ಗಾಂನಲ್ಲಿ ಉಗ್ರರಿಂದ ಹತ್ಯೆಯಾದವರ ಅತ್ಮಕ್ಕೆ ಶಾಂತಿ ಕೋರಿದರು.

ಚೀಕಲಪರ್ವಿ ಸದಾಶಿವಮಹಾಸ್ವಾಮಿಗಳು, ಕಲ್ಲೂರಿನ ದತ್ತಾತ್ರೇಯ ಪೀಠದ ಶ್ರೀಗಳಾದ ಶಿವನಂದ ಶ್ರೀಗಳು, ವಿಶ್ವ ಹಿಂದೂ ಪರೀಷತ್ ತಾ.ಅಧ್ಯಕ್ಷರಾದ ವಿಜಯೇಂದ್ರ ಇಭ್ರಮಾಪುರ್. ಕೃಷ್ಣ, ನರಸಪ್ಪ, ಹರಿಹಾರಪಾಟೀಲ್, ಅರುಣಚಂದಾ, ಪವಾರ್, ಆಂಜನೇಯ್ಯ ,ಮಹಾದೇವ ಬೋಮ್ಮನಾಳ್, ಜೆ.ಸುಧಾಕರ್, ಗೋಪಾಲ್ ಇಭ್ರಮಪುರ್, ವಿಜಯಲಕ್ಷ್ಮಿ, ಅನುರಾಧ,'ಪಾಟೀಲ್, ಸೇರಿದಂತೆ ನೂರಾರು ಯುವ ಬ್ರಿಗೇಡ್ ಸದಸ್ಯರು ಸೇರಿದಂತೆ ಸಾರ್ವಜನಿಕರು ಇದ್ದರು.

# ಭಾರತ–ಪಾಕ್ ಸಂಯುಮ ಕಾಪಾಡಿಕೊಳ್ಳಬೇಕು : ವಿಶ್ವ ಸಂಸ್ಥೆ

**ವಿಶ್ವಸಂಸ್ಥೆ, ಏ.26:** ಪಹಲ್ಗಾಮ್ ದಾಳಿ ನಂತರ ಭಾರತ ಮತ್ತು ಪಾಕಿಸ್ತಾನಗಳು ಸಂಯಮ ಕಾಪಾಡಿಕೊಳ್ಳಬೇಕು ಎಂದು ವಿಶ್ವ ಸಂಸ್ಥೆ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಮನವಿ ಮಾಡಿಕೊಂಡಿದ್ದಾರೆ.

ಭಾರತ ಮತ್ತು ಪಾಕಿಸ್ತಾನದ ನಡುವಿನ ಪರಿಸ್ಥಿತಿಯನ್ನು ಬಹಳ ನಿಕಟವಾಗಿ ಮತ್ತು ಬಹಳ ಕಾಳಜಿಯಿಂದ ಗಮನಿಸುತ್ತಿದ್ದಾರೆ ಮತ್ತು ಗರಿಷ್ಠ ಸಂಯಮವನ್ನು ಕಾಪಾಡಿಕೊಳ್ಳಲು ಮತ್ತು ಮತ್ತಷ್ಟು ಹದಗೆಡದಂತೆ ನೋಡಿಕೊಳ್ಳಲು ಎರಡೂ ಸರ್ಕಾರಗಳಿಗೆ ಮನವಿ ಮಾಡಿದ್ದಾರೆ ಎಂದು ಗುಟೆರೆಸ್ ವಕ್ತಾರರು ತಿಳಿಸಿದ್ದಾರೆ. ಎರಡು ದಿನಗಳ ಹಿಂದೆ 22 ರಂದು ಜಮ್ಮು ಮತ್ತು ಕಾಶ್ಮೀರದಲ್ಲಿ ಸಂಭವಿಸಿದ ಭಯೋತ್ಪಾದಕ ದಾಳಿಯನ್ನು ನಾವು ಖಂಡಿಸುವಲ್ಲಿ ನಾವು ತುಂಬಾ ಸ್ಪಷ್ಟವಾಗಿದ್ದೇವೆ ಎಂದು ಪ್ರಧಾನ ಕಾರ್ಯದರ್ಶಿಯ ವಕ್ತಾರ ಸ್ಟಿಫನ್ ಡುಜಾರಿಕ್ ದೈನಂದಿನ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

26 ನಾಗರಿಕರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ ಗುಟೆರೆಸ್ ಭಾರತ ಮತ್ತು ಪಾಕಿಸ್ತಾನ ಸರ್ಕಾರಗಳೊಂದಿಗೆ ಯಾವುದೇ ಸಂಪರ್ಕವನ್ನು ಹೊಂದಿದ್ದಾರೆಯೇ ಎಂಬ ಪ್ರಶ್ನೆಗೆ ಡುಜಾರಿಕ್ ಉತ್ತರಿಸುತ್ತಿದ್ದರು. ಗುಟೆರೆಸ್ ಯಾವುದೇ ನೇರ ಸಂಪರ್ಕವನ್ನು ಹೊಂದಿಲ್ಲ, ಆದರೆ ಅವರು ಪರಿಸ್ಥಿತಿಯನ್ನು ಬಹಳ ನಿಕಟವಾಗಿ ಮತ್ತು ಬಹಳ ಕಾಳಜಿಯಿಂದ ಗಮನಿಸುತ್ತಿದ್ದಾರೆ ಎಂದು ನಾನು ನಿಮಗೆ ಹೇಳಬಲ್ಲೆ ಎಂದು ಅವರು ಹೇಳಿದರು.

ಪ್ರಧಾನ ಕಾರ್ಯದರ್ಶಿ ಅವರು ಭಾರತ ಮತ್ತು ಪಾಕಿಸ್ತಾನದ ಎರಡೂ ಸರ್ಕಾರಗಳಿಗೆ ಸಂಯಮ ಕಳೆದುಕೊಳ್ಳದೆ ಮಾತುಕತೆ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಲು ಯತ್ನಿಸಬೇಕು ಎಂದು ಅವರು ಹೇಳಿದ್ದಾರೆ.

# ಪಾಕಿಸ್ತಾನ್ ಧ್ವಜ ರಸ್ತೆಗೆ ಅಂಟಿಸಿದ 6 ಜನ ವಶಕ್ಕೆ



**ಕಲಬುರಗಿ,ಏ. 26:** ಪಹಲ್ಗಾಮ್ ಪೈಶಾಚಿಕ ಕೃತ್ಯ ಖಂಡಿಸಿ, ನಗರದ ಜಗತ್ ವೃತ್ತ ಸೇರಿದಂತೆ ಇತರ ಪ್ರಮುಖ ರಸ್ತೆಗಳ ಮೇಲೆ ಪಾಕಿಸ್ತಾನ್ ಧ್ವಜದ ಸ್ಟಿಕರ್‌ಗಳನ್ನು ಅಂಟಿಸಿದ 6 ಜನ ಭಜರಂಗ ದಳದ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪಹಲ್ಗಾನಲ್ಲಿ ಉಗ್ರರು ನಡೆಸಿದ ಹತ್ಯಾಕಾಂಡ ಖಂಡಿಸಿ ಇಂದು ಭಜರಂಗದಳದವರು ಪ್ರತಿಭಟನೆ ಹಮ್ಮಿಕೊಂಡಿದ್ದರು. ಘಟನಾ ಸ್ಥಳಕ್ಕೆ ಭೇಟಿ ನೀಡಿದ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ ಅವರು ಮಾತನಾಡಿ, ಪ್ರತಿಭಟನೆ ಮಾಡುವದು ಪ್ರತಿಯೊಬ್ಬ ನಾಗರಿಕರ ಹಕ್ಕು .ಆದರೆ ಪಾಕಿಸ್ತಾನದ ಧ್ವಜ ನೆಲಕ್ಕೆ ಅಂಟಿಸುವ ಕುರಿತು ಭಜರಂಗದಳ ಸಂಘಟನೆಯವರು ಅನುಮತಿ ಪಡೆದಿರಲಿಲ್ಲ. ಅಲ್ಲದೇ ಇದರಿಂದ ಸಾರ್ವಜನಿಕ ಸಂಚಾರಿ ವ್ಯವಸ್ಥೆಗೆ ತೊಂದರೆ ಯ ಸಾಧ್ಯತೆ ಹಾಗೂ ಮುಂಜಾಗ್ರತೆ ಕ್ರಮವಾಗಿ 6 ಜನರನ್ನು ವಶಕ್ಕೆ ಪಡೆಯಲಾಗಿದೆ.ಯಾವುದೇ ಪ್ರಕರಣ ದಾಖಲಾಗಿಲ್ಲ ಎಂದು ತಿಳಿಸಿದರು.

ರಸ್ತೆ, ಸಾರ್ವಜನಿಕ ಶೌಚಾಲಯ ಗೋಡೆಗಳಿಗೆ ಅಂಟಿಸಿದ ಪಾಕ್ ಧ್ವಜದ ಸ್ಟಿಕರ್ ಗಳನ್ನು ಪೊಲೀಸರು ತೆರವುಗೊಳಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**